ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 129 Wednesday **04-11-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 129 ಬುಧವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ವರುಣನ ಮುನಿಸಿಗೆ ಒಣಗುವ ಹಾದಿಯಲ್ಲಿ 8 ಸಾವಿರ ಸಸಿಗಳು!

ರಸ್ತೆ ಬದಿಯ ಗಿಡಗಳ ಉಳಿವಿಗಾಗಿ ಅರಣ್ಯ ಇಲಾಖೆ ಹರಸಾಹಸ: ಟ್ಯಾಂಕರ್ ಮೂಲಕ ನೀರು ಪೂರೈಕೆ

“ಮುಂಜಾನೆಯ ಮೆರಗು”

ಜಗಳೂರು ನ, 03– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ತಾಲೂಕಿನಾದ್ಯಂತ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿರುವ ಬೆನ್ನಲ್ಲೇ, ಪರಿಸರ ಸಂರಕ್ಷಣೆ ಹಾಗೂ ಅರಣ್ಯ ಪ್ರದೇಶದ ವಿಸ್ತರಣೆ–ಯ ಉದ್ದೇಶದಿಂದ ರಸ್ತೆ ಬದಿಯಲ್ಲಿ ನೆಡಲಾಗಿರುವ ಸಾವಿರಾರು ಸಸಿಗಳೂ ಇದೀಗ ನೀರಿಲ್ಲದೆ ಜೀವನ್ಮರಣದ ಹೋರಾಟ ನಡೆಸುತ್ತಿವೆ. ಸಸಿಗಳನ್ನು ಉಳಿಸಿಕೊಳ್ಳಲು ಅರಣ್ಯ ಇಲಾಖೆ ಅಧಿಕಾರಿಗಳು ಹರಸಾಹಸ ಪಡುತ್ತಿದ್ದಾರೆ.

ತಾಲೂಕಿನಲ್ಲಿ ಈ ಬಾರಿ ಮುಂಗಾರು ಮಳೆಯ ನಿರೀಕ್ಷೆಯೊಂದಿಗೆ ರೈತರು ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಕಾರ್ಯ ಕೈಗೊಂಡಿದ್ದರು. ಆದರೆ ವರುಣನ ಮುನಿಸಿನಿಂದಾಗಿ ಬಿತ್ತನೆ ಮಾಡಿದ ಬೆಳೆಗಳು ಸಮರ್ಪಕವಾಗಿ ಬೆಳವಣಿಗೆ ಕಾಣದೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಪರಿಸ್ಥಿತಿಯ ನಡುವೆಯೇ ಅರಣ್ಯ ಇಲಾಖೆಯ ವತಿಯಿಂದ ಪರಿಸರ ಸಮತೋಲನ ಕಾಪಾಡುವ ಹಾಗೂ ಹಸಿರು ವಲಯವನ್ನು ವಿಸ್ತರಿಸುವ ಉದ್ದೇಶದಿಂದ ವಿವಿಧ ಗ್ರಾಮಗಳ ರಸ್ತೆ ಬದಿಗಳಲ್ಲಿ ಸಾವಿರಾರು ಸಸಿಗಳನ್ನು ನೆಡಲಾಗಿದೆ.

ಸಾಮಾಜಿಕ ವಲಯ ಅರಣ್ಯ ಇಲಾಖೆಯ ವತಿಯಿಂದ ಪ್ರಸಕ್ತ



ಸಾಲಿನಲ್ಲಿ ತಾಲೂಕಿನ ವಿವಿಧ ಗ್ರಾಮಗಳ ರಸ್ತೆ ಬದಿಗಳಲ್ಲಿ 8 ಸಾವಿರಕ್ಕೂ ಅಧಿಕ ಸಸಿಗಳನ್ನು ನೆಡಲಾಗಿದೆ. ಮೇ ತಿಂಗಳಲ್ಲಿ ಉತ್ತಮ ಮಳೆಯಾದ ಹಿನ್ನೆಲೆಯಲ್ಲಿ ಸಸಿ ನೆಡುವ ಕಾರ್ಯಕ್ಕೆ ಚಾಲನೆ ನೀಡಲಾಗಿತ್ತು. ಆರಂಭದಲ್ಲಿ ಮಳೆಯ ಆಶ್ರಯದಿಂದ ಚಿಗುರೊಡೆದು ಬೆಳವಣಿಗೆ ಕಾಣುತ್ತಿದ್ದ ಸಸಿಗಳಿಗೆ ಇದೀಗ ಮಳೆಯ ಕೊರತೆ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಸಾಮಾನ್ಯವಾಗಿ ಸಸಿಗಳು ನೆಟ್ಟ ಆರಂಭಿಕ ಹಂತದಲ್ಲಿ ನಿರಂತರವಾಗಿ ನೀರು ಹಾಗೂ ಸೂಕ್ತ ಆರೈಕೆಯ ಅಗತ್ಯವಿರುತ್ತದೆ. ಆದರೆ ಮಳೆ ಕೈಕೊಟ್ಟಿರುವುದರಿಂದ ಮಣ್ಣಿನಲ್ಲಿನ ತೇವಾಂಶ ಕಡಿಮೆಯಾಗಿ ಸಸಿಗಳು ಬಾಡತೊಡಗಿವೆ. ಕೆಲವು ಸಸಿಗಳು ಒಣಗುವ ಹಂತ ತಲುಪಿದ್ದು, ಇನ್ನುಳಿದ ಸಸಿಗಳನ್ನು ಉಳಿಸಿಕೊಳ್ಳುವುದೇ ಅರಣ್ಯ ಇಲಾಖೆಗೆ ಸವಾಲಾಗಿದೆ.

ಟ್ಯಾಂಕರ್ ನೀರೇ ಆಸರೆ

ರಸ್ತೆ ಬದಿಯಲ್ಲಿ ನೆಟ್ಟಿರುವ ಸಸಿಗಳು ಒಣಗದಂತೆ ಸಂರಕ್ಷಿಸಲು ಅರಣ್ಯ ಇಲಾಖೆಯು ಇದೀಗ ಟ್ಯಾಂಕರ್ ಮೂಲಕ ನೀರು ಪೂರೈಸುವ ಕಾರ್ಯ–ಕ್ಕೆ ಮುಂದಾಗಿದೆ. ವಿವಿಧ ಗ್ರಾಮಗಳ ರಸ್ತೆ ಬದಿಗಳಲ್ಲಿ ನೆಟ್ಟಿರುವ ಸಸಿಗಳಿಗೆ ನೀರುಣಿಸಲು ಸಿಬ್ಬಂದಿ ಶ್ರಮಿಸುತ್ತಿದ್ದಾರೆ. ಮಳೆಯ ಅಭಾವದ ನಡುವೆಯೂ ಸಾವಿರಾರು ಸಸಿಗಳನ್ನು ಉಳಿಸಿಕೊಳ್ಳಲು ಇಲಾಖೆ ನಿರಂತರ ಪ್ರಯತ್ನ ನಡೆಸುತ್ತಿದೆ.

ಅರಣ್ಯ ಪ್ರದೇಶದ ವಿಸ್ತರಣೆ ಕೇವಲ ಮರಗಳನ್ನು ಬೆಳೆಸುವ ಕಾರ್ಯವಲ್ಲ. ಪರಿಸರ ಸಮತೋಲನ, ಅಂತರ್ಜಲ ವೃದ್ಧಿ, ಮಣ್ಣಿನ ಸಂರಕ್ಷಣೆ ಹಾಗೂ ಹವಾಮಾನ ವೈಪರೀತ್ಯ ತಗ್ಗಿಸುವಲ್ಲಿ ಅರಣ್ಯ ಸಂಪತ್ತು ಮಹತ್ವದ ಪಾತ್ರ ವಹಿಸುತ್ತದೆ. ಅರಣ್ಯ ಪ್ರದೇಶ ಹೆಚ್ಚಾದಾಗ ಪರಿಸರದ ಮೇಲೆ ಸಕಾರಾತ್ಮಕ ಪರಿಣಾಮ ಉಂಟಾಗುವ ನಿರೀಕ್ಷೆಯಿದೆ. ಈ ನಿಟ್ಟಿನಲ್ಲಿ ಸರ್ಕಾರವೂ ಅರಣ್ಯೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದೆ. ಆದರೆ ಮಳೆಯ ಅಭಾವದಿಂದ ಹಸಿರು ಪರಿಸರ ನಿರ್ಮಾಣದ ಪ್ರಯತ್ನಕ್ಕೆ ಹಿನ್ನಡೆಯಾಗುವ ಆತಂಕ ಎದುರಾಗಿದೆ.

ರೈತರ ಸಹಕಾರ ಅಗತ್ಯ

ರಸ್ತೆ ಬದಿಯಲ್ಲಿ ಸಸಿಗಳನ್ನು ನೆಟ್ಟಿರುವ ಪ್ರದೇಶಗಳ ಪಕ್ಕದಲ್ಲೇ ಅನೇಕ ರೈತರ ಜಮೀನುಗಳಿವೆ. ಜಮೀನುಗಳಲ್ಲಿ ಲಭ್ಯವಿರುವ ಅಲ್ಪಸ್ವಲ್ಪ ನೀರನ್ನು ಬಳಸಿಕೊಂಡು ರೈತರು ತಮ್ಮ ಜಮೀನಿನ ಅಂಚಿನಲ್ಲಿರುವ ರಸ್ತೆ ಬದಿಯ ಸಸಿಗಳಿಗೂ ನೀರುಣಿಸಿದರೆ ಅವುಗಳ ಉಳಿವಿಗೆ ಸಹಕಾರಿಯಾಗಲಿದೆ. ಸಾರ್ವಜನಿಕರು, ರೈತರು ಹಾಗೂ ಸ್ಥಳೀಯ ಸಂಘ–ಸಂಸ್ಥೆಗಳು ಸಸಿಗಳ ಸಂರಕ್ಷಣೆಯಲ್ಲಿ ಕೈಜೋಡಿಸಬೇಕಿದೆ.

ಸಸಿಗಳನ್ನು ನೆಡುವುದಷ್ಟೇ ಅರಣ್ಯೀಕರಣದ ಉದ್ದೇಶವಾಗಬಾರದು. ಅವು ಮರಗಳಾಗಿ ಬೆಳೆಯುವವರೆಗೂ ನಿರಂತರ ಆರೈಕೆ ಮಾಡುವುದು



ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅರಣ್ಯ ಇಲಾಖೆಯ ಪ್ರಯತ್ನ–ಕ್ಕೆ ಸಾರ್ವಜನಿಕರ ಸಹಕಾರ ದೊರೆತರೆ ಸಾವಿರಾರು ಸಸಿಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿದೆ.

ರೈತ ಸಂಘದ ಪ್ರಧಾನ ಕಾರ್ಯದರ್ಶಿ ರಾಜು: ಪ್ರಕೃತಿಯ ಮುನಿಸು ಮನುಷ್ಯನ ಬದುಕಿನ ಮೇಲಷ್ಟೇ ಅಲ್ಲದೆ ಅರಣ್ಯ ಪ್ರದೇಶದ ಮೇಲೂ ವ್ಯತಿರಿಕ್ತ ಪರಿಣಾಮ ಬೀರಿದೆ. ಮಳೆಯಿಲ್ಲದೆ ರಸ್ತೆ ಬದಿಯ ಸಸಿಗಳು ಒಣಗುತ್ತಿವೆ. ರಸ್ತೆ ಪಕ್ಕದ ಜಮೀನುಗಳ ಮಾಲೀಕರು ತಮ್ಮ ಜಮೀನಿನಲ್ಲಿ ಲಭ್ಯವಿರುವ ಅಲ್ಪಸ್ವಲ್ಪ ನೀರನ್ನು ಸಸಿಗಳಿಗೆ ಉಣಿಸಿದರೆ ಅವು ಜೀವಂತವಾಗಿ ಉಳಿಯಲು ಅನುಕೂಲವಾಗಲಿದೆ. ಪರಿಸರ ಸಂರಕ್ಷಣೆ ಎಲ್ಲರ ಹೊಣೆಗಾರಿಕೆಯಾಗಿದ್ದು, ಸಾರ್ವಜನಿಕರು ಸಹಕರಿಸಬೇಕು.

ಸಾಮಾಜಿಕ ವಲಯ ಅರಣ್ಯಾಧಿಕಾರಿ ಮಹೇಶ್ವರಪ್ಪ: ಪ್ರಸಕ್ತ ಸಾಲಿನ ಮೇ ತಿಂಗಳಲ್ಲಿ ಉತ್ತಮ ಮಳೆಯಾದ ಹಿನ್ನೆಲೆಯಲ್ಲಿ ತಾಲೂಕಿನ ವಿವಿಧ ಗ್ರಾಮಗಳ ರಸ್ತೆ ಬದಿಗಳಲ್ಲಿ 8 ಸಾವಿರಕ್ಕೂ ಅಧಿಕ ಸಸಿಗಳನ್ನು ನೆಡಲಾಗಿದೆ. ಮಳೆಯ ಕೊರತೆಯಿಂದ ಸಸಿಗಳ ಬೆಳವಣಿಗೆಗೆ ತೊಂದರೆ–ಯಾಗುತ್ತಿದೆ. ಸಸಿಗಳನ್ನು ಉಳಿಸಿಕೊಳ್ಳುವ ಉದ್ದೇಶದಿಂದ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದ್ದು, ಅಗತ್ಯ ಆರೈಕೆ ಕೈಗೊಳ್ಳಲಾಗುತ್ತಿದೆ.

ಒನಕೆ ಓಬವ್ವ ಜಯಂತಿ ಪೂರ್ವಭಾವಿ ಸಭೆಗೆ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಲು ಸೂಚನೆ

“ಮುಂಜಾನೆಯ ಮೆರಗು”

ಜಗಳೂರು ನ, 03– ವೀರ ವನಿತೆ ಒನಕೆ ಓಬವ್ವ ಜಯಂತಿ ಆಚರಣೆಯ ಪೂರ್ವಸಿದ್ಧತಾ ಸಭೆಗೆ ತಾಲೂಕು ಮಟ್ಟದ ಎಲ್ಲ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸಬೇಕು ಎಂದು ತಹಶೀಲ್ದಾರ್ ಗುರುಬಸವರಾಜ್ ಸೂಚಿಸಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಮಾಧ್ಯಮದವರಿಗೆ ಮಾಹಿತಿ ನೀಡಿದ ಅವರು, ನ.5ರ ಗುರುವಾರ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಒನಕೆ ಓಬವ್ವ ಜಯಂತಿ ಆಚರಣೆಯ ಕುರಿತು ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಯಲ್ಲಿ ಜಯಂತಿ ಆಚರಣೆಯ ರೂಪುರೇಷೆ, ಕಾರ್ಯಕ್ರಮದ ಸಿದ್ಧತೆ ಹಾಗೂ ವಿವಿಧ ಇಲಾಖೆಗಳ ಜವಾಬ್ದಾರಿಗಳ ಕುರಿತು ಚರ್ಚಿಸಲಾಗುವುದು ಎಂದು ತಿಳಿಸಿದರು.

ತಾಲೂಕು ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು ಸಭೆಗೆ ಕಡ್ಡಾಯವಾಗಿ ಹಾಜರಾಗಿ ಅಗತ್ಯ ಸಲಹೆ ಮತ್ತು ಸಹಕಾರ



ನೀಡಬೇಕು. ಅಲ್ಲದೆ, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ತಮ್ಮ ಅಮೂಲ್ಯ ಸಲಹೆ–ಸೂಚನೆಗಳನ್ನು ನೀಡಬೇಕು ಎಂದು ಮನವಿ ಮಾಡಿದರು.

ನೀರು ಅಮೂಲ್ಯ ಸಂಪತ್ತು, ಮಿತ ಬಳಕೆ ಅಗತ್ಯ: ಸಾಧಿಕ್‌ವುಲ್ಲಾ

“ಮುಂಜಾನೆಯ ಮೆರಗು”

ಜಗಳೂರು ನ, 03– ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ವ್ಯರ್ಥವಾಗಿ ಹರಿದುಹೋಗದಂತೆ ನೀರುಗಂಟಿಗಳು ಎಚ್ಚರಿಕೆ ವಹಿಸಬೇಕು. ಸಾರ್ವಜನಿಕರು ಕೂಡ ತಮ್ಮ ಅಗತ್ಯ–ಕ್ಕೆ ತಕ್ಕಷ್ಟು ಮಾತ್ರ ನೀರನ್ನು ಬಳಕೆ ಮಾಡಿಕೊಂಡು ನೀರಿನ ಮಿತವ್ಯಯಕ್ಕೆ ಆದ್ಯತೆ ನೀಡಬೇಕು ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ (ಎಇಇ) ಸಾಧಿಕ್‌ವುಲ್ಲಾ ಹೇಳಿದರು.

ಪಟ್ಟಣದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಚೇರಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಪ್ರಸಕ್ತ ಸಾಲಿನಲ್ಲಿ ಮಳೆ ಕೊರತೆಯಿಂದಾಗಿ ಗ್ರಾಮೀಣ ಭಾಗಗಳಲ್ಲಿ ನೀರಿನ ಅಭಾವ ಎದುರಾಗುವ ಆತಂಕವಿದೆ. ಈ ಹಿನ್ನೆಲೆಯಲ್ಲಿ ಲಭ್ಯವಿರುವ ನೀರನ್ನು ಸಮರ್ಪಕವಾಗಿ ನಿರ್ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ತಾಲೂಕಿನ ಕೆಲವು ಗ್ರಾಮಗಳಲ್ಲಿ ನಳಗಳ ಮೂಲಕ ಸರಬರಾಜು ಮಾಡುವ ನೀರು ಸಾರ್ವಜನಿಕರ ನಿರ್ಲಕ್ಷ್ಯದಿಂದ ಅನಗತ್ಯವಾಗಿ ರಸ್ತೆಗಳ ಮೇಲೆ ಹರಿದು ವ್ಯರ್ಥವಾಗುತ್ತಿರುವುದು ಕಂಡುಬಂದಿದೆ. ನಳಗಳಿಗೆ ಅಳವಡಿಸಿರುವ ಕೊಳವೆಗಳನ್ನು ಸರಿಯಾಗಿ ಮುಚ್ಚದೆ ಬಿಡುವುದು ಹಾಗೂ ನೀರು ತುಂಬಿದ ನಂತರವೂ ನಳಗಳನ್ನು ಬಂದ್ ಮಾಡದಿರುವುದರಿಂದ ಅಮೂಲ್ಯವಾದ ಕುಡಿಯುವ ನೀರು ಪೋಲಾಗುತ್ತಿದೆ. ಇಂತಹ ಘಟನೆಗಳು ಮರುಕಳಿಸದಂತೆ ನೀರುಗಂಟಿಗಳು ನಿರಂತರ ನಿಗಾ ವಹಿಸಬೇಕು ಎಂದು ಸೂಚಿಸಿದರು.

ಗ್ರಾಮಗಳಲ್ಲಿ ನೀರು ಸರಬರಾಜು



ಮಾಡುವ ಸಮಯದಲ್ಲಿ ನೀರುಗಂಟಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸಾರ್ವಜನಿಕರಿಗೂ ನೀರಿನ ಮಿತ ಬಳಕೆ–ಯ ಕುರಿತು ಅರಿವು ಮೂಡಿಸಬೇಕು. ನೀರು ವ್ಯರ್ಥವಾಗುತ್ತಿರುವುದು ಕಂಡುಬಂದಲ್ಲಿ ತಕ್ಷಣ ಕ್ರಮ ಕೈಗೊಂಡು ಪೋಲಾಗುವುದನ್ನು ತಡೆಯಬೇಕು. ನೀರು ಇಂದು ಅಮೂಲ್ಯ ಸಂಪನ್ಮೂಲವಾಗಿದ್ದು, ಮುಂದಿನ ದಿನಗಳಲ್ಲಿಯೂ ಎಲ್ಲರಿಗೂ ಲಭ್ಯವಾಗುವಂತೆ ಸಂರಕ್ಷಿಸುವ ಅಗತ್ಯವಿದೆ ಎಂದು ತಿಳಿಸಿದರು.

ಈಗಾಗಲೇ ಮಳೆ ಕೊರತೆ ಹಾಗೂ ಅಂತರ್ಜಲ ಮಟ್ಟ ಕುಸಿತದಿಂದಾಗಿ ತಾಲೂಕಿನ ಕಲ್ಲೇದೇವಪುರ, ಮರೇನಹಳ್ಳಿ ಮತ್ತು ಉಚ್ಚಂಗಿಪುರ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಈ ಗ್ರಾಮಗಳಿಗೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುತ್ತಿದೆ. ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕರು ನೀರನ್ನು ಮಿತವಾಗಿ ಬಳಸುವ ಮೂಲಕ ನೀರಿನ ಸಂರಕ್ಷಣೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ದುರ್ಗಮ್ಮ ದೇವಿಗೆ ವಿಶೇಷ ಪೂಜೆ: ಭಕ್ತರಿಂದ ದರ್ಶನ

“ಮುಂಜಾನೆಯ ಮೆರಗು”

ಜಗಳೂರು ನ, 03– ಪಟ್ಟಣದ ಜೆಸಿಆರ್ ಬಡಾವಣೆಯಲ್ಲಿರುವ ದುರ್ಗಮ್ಮ ದೇವಾಲಯದಲ್ಲಿ ಮಂಗಳವಾರ ವಿಶೇಷ ಪೂಜಾ ಕೈಂಕರ್ಯಗಳನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಲಾಯಿತು.

ಬೆಳಗ್ಗೆಯಿಂದಲೇ ದೇವಾಲಯದಲ್ಲಿ ಧಾರ್ಮಿಕ ವಿಧಿವಿಧಾನಗಳು ಆರಂಭಗೊಂಡಿದ್ದು, ದೇವಿಗೆ ವಿಶೇಷ ಅಲಂಕಾರ ಮಾಡಿ ಪೂಜೆ ಸಲ್ಲಿಸಲಾಯಿತು. ಬೆಳಗ್ಗೆಯಿಂದ ಸಂಜೆವರೆಗೂ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ನೂರಾರು ಭಕ್ತರು ದೇವಾಲಯಕ್ಕೆ ಆಗಮಿಸಿ



ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ದೇವಾಲಯದ ಆವರಣದಲ್ಲಿ ಭಕ್ತಿಭಾವದ ವಾತಾವರಣ ಮನೆಮಾಡಿತ್ತು. ಭಕ್ತರು ದೇವಿಗೆ ವಿಶೇಷ ಪೂಜೆ ಸಲ್ಲಿಸಿ ಕುಟುಂಬದ ಸುಖ, ಶಾಂತಿ, ಆರೋಗ್ಯ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಮಳೆ ಕೊರತೆಯ ನಡುವೆ ಕೂಲಿಕಾರ್ಮಿಕರಿಗೆ ವಿಬಿಜಿ ರಾಮ್ ಜಿ ಯೋಜನೆ ಆಸರೆ

17 ಗ್ರಾ.ಪಂ. ವ್ಯಾಪ್ತಿಯಲ್ಲಿ 2,544 ಕಾರ್ಮಿಕರಿಗೆ ಉದ್ಯೋಗ

“ಮುಂಜಾನೆಯ ಮೆರಗು”

ಜಗಳೂರು ನ, 03– ತಾಲೂಕಿನಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳು ಕುಂಠಿತಗೊಂಡು ಗ್ರಾಮೀಣ ಭಾಗದ ಜನರು ಉದ್ಯೋಗವಿಲ್ಲದೆ ಸಂಕಷ್ಟ ಎದುರಿಸುತ್ತಿರುವ ಸಂದರ್ಭದಲ್ಲಿ ವಿಬಿಜಿ ರಾಮ್ ಜಿ ಯೋಜನೆ ಕೂಲಿಕಾರ್ಮಿಕರಿಗೆ ವರದಾನವಾಗಿ ಪರಿಣಮಿಸಿದೆ.

ತಾಲೂಕಿನ 17 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಒಟ್ಟು 2,544 ಕೂಲಿಕಾರ್ಮಿಕರು ಯೋಜನೆಯಡಿ ನೋಂದಾಯಿಸಿಕೊಂಡು ವಿವಿಧ ಅಭಿವೃದ್ಧಿ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದಾರೆ. ವಿಶೇಷವಾಗಿ ಮಳೆ ಇಲ್ಲದ ಕಾರಣ ಕೃಷಿ ಕೆಲಸಗಳು ಕಡಿಮೆಯಾಗಿರುವ ಸಂದರ್ಭದಲ್ಲಿ ಗ್ರಾಮೀಣ ಕೂಲಿಕಾರ್ಮಿಕರಿಗೆ ಈ ಯೋಜನೆ ಜೀವನಾಧಾರವಾಗಿದೆ.

ಯೋಜನೆಯಡಿ ಗ್ರಾಮ ಪಂಚಾಯಿತಿಗಳ ಮೂಲಕ ಕೆರೆಗಳ ಹೂಳೆತ್ತುವುದು, ಕೆರೆಗಳ ಸ್ವಚ್ಛತೆ ಸೇರಿದಂತೆ ವಿವಿಧ ಜಲಸಂರಕ್ಷಣೆ ಹಾಗೂ ಸಾರ್ವಜನಿಕ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. ಇದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಅಂತರ್ಜಲ ವೃದ್ಧಿ, ಮಳೆನೀರು ಸಂಗ್ರಹ ಹಾಗೂ ಕೃಷಿ ಚಟುವಟಿಕೆಗಳಿಗೆ ಪೂರಕ ವಾತಾವರಣ ನಿರ್ಮಾಣವಾಗುವ ನಿರೀಕ್ಷೆಯಿದೆ.

ಪ್ರತಿದಿನ ಸರಿಸುಮಾರು ಒಂದು ಸಾವಿರಕ್ಕೂ ಅಧಿಕ ಕೂಲಿಕಾರ್ಮಿಕರು ಕಾಮಗಾರಿಗಳಲ್ಲಿ ಪಾಲ್ಗೊಂಡು ಶ್ರಮಿಸುತ್ತಿದ್ದಾರೆ. ಗ್ರಾಮ ಪಂಚಾಯಿತಿ



ಅಧಿಕಾರಿಗಳು ಹಾಗೂ ಸಿಬ್ಬಂದಿ ಮೂಲಕ ಕಾರ್ಮಿಕರಿಗೆ ಕೆಲಸ ಒದಗಿಸುವ ವ್ಯವಸ್ಥೆ ಮಾಡಲಾಗುತ್ತಿದೆ. ಇದರಿಂದ ಕೃಷಿ ಕೂಲಿ ಕೆಲಸವನ್ನೇ ನಂಬಿಕೊಂಡಿರುವ ಬಡ ಕುಟುಂಬಗಳಿಗೆ ಆರ್ಥಿಕ ನೆರವು ದೊರೆ–ಯುತ್ತಿದೆ.

ಕಾಮಗಾರಿಗಳಲ್ಲಿ ಭಾಗವಹಿಸುವ ಕಾರ್ಮಿಕರಿಗೆ ಅವರು ನಿರ್ವಹಿಸಿದ ಕೆಲಸದ ಆಧಾರದ ಮೇಲೆ ಕೆಟಿಎಸ್ (ಎಲೆಕ್ಟ್ರಾನಿಕ್ ಹಣ ವರ್ಗಾವಣೆ) ವ್ಯವಸ್ಥೆಯ ಮೂಲಕ ನೇರವಾಗಿ ಬ್ಯಾಂಕ್ ಖಾತೆಗಳಿಗೆ ಕೂಲಿ ಹಣ ಜಮಾ ಮಾಡಲಾಗುತ್ತಿದೆ. ಹೊಸ ನಿಯಮಾವಳಿಗಳು ಜಾರಿಯಾಗಿರುವ ಹಿನ್ನೆಲೆಯಲ್ಲಿ ಕೆಲವು ತಾಂತ್ರಿಕ ಪ್ರಕ್ರಿಯೆಗಳಿಂದಾಗಿ ಕೂಲಿ ಹಣ ಖಾತೆಗಳಿಗೆ ಜಮೆಯಾಗಲು ಕೆಲ ದಿನಗಳ ವಿಳಂಬವಾಗುತ್ತಿದೆ. ಆದರೂ ಯೋಜನೆಯಡಿ ಅರ್ಹ ಕಾರ್ಮಿಕರಿಗೆ ನಿರಂತರವಾಗಿ ಉದ್ಯೋಗ ಒದಗಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದು ವಿಬಿಜಿ ರಾಮ್ ಜಿ ಯೋಜನೆಯ ಸಹಾಯಕ ನಿರ್ದೇಶಕ ಲೋಹಿತ್ ಕುಮಾರ್ ತಿಳಿಸಿದ್ದಾರೆ.

ಕೃಷಿ ಚಟುವಟಿಕೆಗಳಿಗೆ ಮಳೆ ಅವಲಂಬನೆಯೇ ಹೆಚ್ಚಾಗಿರುವ ಜಗಳೂರು ತಾಲೂಕಿನಲ್ಲಿ ಮಳೆ ಕೈಕೊಟ್ಟಾಗ ಗ್ರಾಮೀಣ ಜನರ ಬದುಕು ಸಂಕಷ್ಟಕ್ಕೆ ಸಿಲುಕುತ್ತದೆ. ಇಂತಹ ಸಂದರ್ಭದಲ್ಲಿ ಉದ್ಯೋಗ ಖಾತ್ರಿ ಯೋಜನೆ ಕೂಲಿಕಾರ್ಮಿಕರ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುವುದರ ಜತೆಗೆ ಗ್ರಾಮಗಳ ಅಭಿವೃದ್ಧಿಗೂ ಸಹಕಾರಿಯಾಗಿದೆ.

ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರಿಗೆ ಪಿತೃ ವಿಯೋಗ

“ಮುಂಜಾನೆಯ ಮೆರಗು”

ಜಗಳೂರು ನ, 03– ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ಅವರ ತಂದೆ, ತಾಲ್ಲೂಕಿನ ಗೌರಿಪುರ ಗ್ರಾಮದ ನಿಂಬುಳಗರೆ ಕೊಟ್ರಪ್ಪ (86) ಅವರು ವಯೋಸಹಜ ಅನಾರೋಗ್ಯದಿಂದ ಮಂಗಳವಾರ ಸಂಜೆ ನಿಧನರಾದರು.



ಮೃತರು ಪತ್ನಿ, ಮೂವರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧುಮಿತ್ರರು ಹಾಗೂ ಹಿತೈಷಿಗಳನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯನ್ನು ನ.4ರ ಬುಧವಾರ ಬೆಳಿಗ್ಗೆ 11.30ಕ್ಕೆ ಅವರ

ಹಾಲು, ಮೊಸರಿನ ದರ ಇಳಿಕೆಗೆ ಆಗ್ರಹ ಸರ್ಕಾರದ ವಿರುದ್ಧ ಆರ್. ಅಶೋಕ್ ವಾಗ್ದಾಳಿ

"ಮುಂಜಾನೆಯ ಮೆರಗು"

ಬೆಂಗಳೂರು ನ, 03– ಮೊಸರಿನ ದರದಲ್ಲಿ ಅಲ್ಪ ಪ್ರಮಾಣದ ಇಳಿಕೆ ಮಾಡುವ ಮೂಲಕ ಜನರ ಆಕ್ರೋಶವನ್ನು ತಣಿಸುವ ಪ್ರಯತ್ನ ಮಾಡಬಾರದು. ಹಾಲು ಮತ್ತು ಮೊಸರಿನ ಬೆಲೆ ಏರಿಕೆಯನ್ನು ಮರುಪರಿಶೀಲಿಸಿ ಗ್ರಾಹಕರಿಗೆ ಅನುಕೂಲವಾಗುವಂತೆ ದರ ಕಡಿತಗೊಳಿಸಬೇಕು ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿರುವ ಅವರು, ಮೊಸರಿನ ಪ್ರತಿ ಲೀಟರ್‌ಗೆ 14 ಹೆಚ್ಚಳ ಮಾಡಿದ ಬಳಿಕ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾದ ಹಿನ್ನೆಲೆಯಲ್ಲಿ ಅಲ್ಪ ಪ್ರಮಾಣದಲ್ಲಿ ದರ ಇಳಿಸುವುದಾಗಿ ಸರ್ಕಾರ ಹೇಳುತ್ತಿರುವುದು ಸರಿಯಲ್ಲ. ಮೊದಲು ಹೆಚ್ಚಿನ ಪ್ರಮಾಣದಲ್ಲಿ ಬೆಲೆ ಏರಿಸಿ, ನಂತರ ಅಲ್ಪ ಇಳಿಕೆ ಮಾಡುವುದರಿಂದ ಜನಸಾಮಾನ್ಯರಿಗೆ ನಿಜವಾದ ಪರಿಹಾರ ದೊರೆಯುವುದಿಲ್ಲ ಎಂದು ಟೀಕಿಸಿದ್ದಾರೆ.

ಹಾಲು ಮತ್ತು ಮೊಸರಿನ ದರ ಏರಿಕೆಯಿಂದ ಸಾಮಾನ್ಯ ಕುಟುಂಬಗಳ ಮಾಸಿಕ ಬಜೆಟ್ ಮೇಲೆ ಹೆಚ್ಚುವರಿ ಹೊರೆ ಬಿದ್ದಿದೆ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಜನರಿಗೆ ಮತ್ತಷ್ಟು ಆರ್ಥಿಕ ಹೊರೆ ಹೊರಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಹಾಲು ಉತ್ಪಾದಕರ ಹಿತ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ. ರೈತರಿಗೆ ಸೂಕ್ತ ಪ್ರೋತ್ಸಾಹಧನ ನೀಡುವ ಮೂಲಕ ಅವರ ಆರ್ಥಿಕ ಸ್ಥಿತಿಯನ್ನು ಬಲಪಡಿಸಬೇಕು. ಆದರೆ ರೈತರಿಗೆ ನೆರವು ನೀಡುವ ಹೆಸರಿನಲ್ಲಿ ಅದರ ಸಂಪೂರ್ಣ ಹೊರೆಯನ್ನು ಗ್ರಾಹಕರ ಮೇಲೆ ವರ್ಗಾಯಿಸುವುದು ಎಷ್ಟು ಸಮಂಜಸ ಎಂದು ಪ್ರಶ್ನಿಸಿದ್ದಾರೆ.

ಸರ್ಕಾರಕ್ಕೆ ನಿಜವಾಗಿಯೂ ರೈತರ ಬಗ್ಗೆ ಕಾಳಜಿ ಇದ್ದರೆ ಅಗತ್ಯ ಪ್ರೋತ್ಸಾಹಧನವನ್ನು ಸರ್ಕಾರವೇ ಭರಿಸಬೇಕು. ನೀರಿನ ಬಾಟಲಿ ಬೆಲೆ ಏರಿಕೆಯಾದರೆ ಯಾರೂ ಪ್ರಶ್ನಿಸುವುದಿಲ್ಲ ಎಂಬ ಮುಖ್ಯಮಂತ್ರಿಗಳ ಹೇಳಿಕೆಯನ್ನು ಉಲ್ಲೇಖಿಸಿ, ಹಾಲು ಮತ್ತು ಮೊಸರು ಜನರ ದಿನನಿತ್ಯದ ಅಗತ್ಯ ವಸ್ತುಗಳಾಗಿದ್ದು, ಅವುಗಳ ಬೆಲೆ ಏರಿಕೆಯನ್ನು ಸಮರ್ಥಿಸಿಕೊಳ್ಳುವುದು ಸರಿಯಲ್ಲ ಎಂದು ಆಕ್ಷೇಪಿಸಿದ್ದಾರೆ.

ಮೊಸರಿನ ದರದಲ್ಲಿ ಅಲ್ಪ ಇಳಿಕೆ ಮಾಡುವುದಷ್ಟೇ ಸಾಕಾಗುವುದಿಲ್ಲ. ಹಾಲಿನ ದರ ಏರಿಕೆಯನ್ನೂ ಮರುಪರಿಶೀಲಿಸಿ, ಹಾಲು ಮತ್ತು ಮೊಸರಿನ ಬೆಲೆಯನ್ನು ಕಡಿತಗೊಳಿಸಬೇಕು. ರೈತರಿಗೆ ಸರ್ಕಾರದಿಂದ ಸೂಕ್ತ ಪ್ರೋತ್ಸಾಹಧನ ನೀಡಿ, ಅದರ ಆರ್ಥಿಕ ಹೊರೆಯನ್ನು ಗ್ರಾಹಕರ ಮೇಲೆ ಹಾಕಬಾರದು ಎಂದು ಆರ್. ಅಶೋಕ್ ಆಗ್ರಹಿಸಿದ್ದಾರೆ.

ಕೆಂಪೇಗೌಡರ ಪ್ರತಿಮೆಗೆ ಸಿಎಂ ಡಿ.ಕೆ. ಶಿವಕುಮಾರ್ ಮಾಲಾರ್ಪಣೆ

"ಮುಂಜಾನೆಯ ಮೆರಗು"

ಹಿರಿಯೂರು ನ, 03– ತಾಲ್ಲೂಕಿನ ಹರಿಯಬ್ಬೆ ಗ್ರಾಮದಲ್ಲಿ ನಾಡಪ್ರಭು ಕೆಂಪೇಗೌಡರ ಪ್ರತಿಮೆಗೆ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.



ಇದೇ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಾಗೂ ಹಿರಿಯ ರಂಗಭೂಮಿ ಕಲಾವಿದರಾದ ಜಿ.ಡಿ. ತಿಮ್ಮಯ್ಯ ಅವರನ್ನು ಸನ್ಮಾನಿಸಿ ಗೌರವಿಸಿದರು.

ಕಲೆ ಮತ್ತು ರಂಗಭೂಮಿ ಕ್ಷೇತ್ರಕ್ಕೆ ತಮ್ಮದೇ ಆದ ಕೊಡುಗೆ ನೀಡಿರುವ ಕಲಾವಿದರನ್ನು ಗುರುತಿಸಿ ಗೌರವಿಸುವುದು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿದೆ.

ಕಾರ್ಯಕ್ರಮದಲ್ಲಿ ಸಚಿವ ಟಿ. ರಘುಮೂರ್ತಿ, ಶಾಸಕ ಡಾ. ಎಚ್.ಡಿ. ರಂಗನಾಥ್, ಕಾಂಗ್ರೆಸ್ ಮುಖಂಡ ಸುಹಾಸ್ ಸುಧಾಕರ್, ಸ್ಥಳೀಯ ಜನಪ್ರತಿನಿಧಿಗಳು ಹಾಗೂ ವಿವಿಧ ಕ್ಷೇತ್ರಗಳ ಗಣ್ಯರು ಉಪಸ್ಥಿತರಿದ್ದರು.

ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕಾಮಗಾರಿಗೆ ಡಿ.ಕೆ. ಶಿವಕುಮಾರ್ ಶಂಕುಸ್ಥಾಪನೆ

"ಮುಂಜಾನೆಯ ಮೆರಗು"

ಹಿರಿಯೂರು ನ, 03– ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಧರ್ಮಪುರದಲ್ಲಿ ನೂತನ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ನಿರ್ಮಾಣ ಕಾಮಗಾರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಶಂಕುಸ್ಥಾಪನೆ ನೆರವೇರಿಸಿದರು.



ಧರ್ಮಪುರ ಭಾಗದ ಸಾರ್ವಜನಿಕರಿಗೆ ಸುಗಮ ಸಾರಿಗೆ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ನೂತನ ಬಸ್ ನಿಲ್ದಾಣ ನಿರ್ಮಾಣಕ್ಕೆ ಚಾಲನೆ ನೀಡಲಾಗಿದ್ದು, ಇದರಿಂದ ಸ್ಥಳೀಯ ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗುವ ನಿರೀಕ್ಷೆಯಿದೆ.

ಈ ಸಂದರ್ಭದಲ್ಲಿ ಸಚಿವರಾದ ಟಿ. ರಘುಮೂರ್ತಿ, ಕೆ.ಎಸ್. ಬಸವಂತಪ್ಪ, ಈಶ್ವರ ಖಂಡ್ರೆ, ಕೆ.ಎಚ್. ಮುನಿಯಪ್ಪ, ಜಮೀರ್ ಅಹಮದ್ ಖಾನ್, ಡಾ. ಅಜಯ್ ಧರ್ಮಸಿಂಗ್, ಎಚ್.ಸಿ. ಬಾಲಕೃಷ್ಣ, ಕರ್ನಾಟಕ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಸೇರಿದಂತೆ ವಿವಿಧ ಶಾಸಕರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಗ್ರಾಮೀಣ ಭಾಗಕ್ಕೆ ಬ್ಯಾಂಕಿಂಗ್ ಸೇವೆ ವಿಸ್ತರಣೆ ಶ್ಲಾಘನೀಯ: ಸಚಿವ ಯು.ಟಿ. ಖಾದರ್

"ಮುಂಜಾನೆಯ ಮೆರಗು"

ಬೆಳ್ತಂಗಡಿ ನ, 03– ತಾಲೂಕಿನ ಇಂದಬೆಟ್ಟುವಿನಲ್ಲಿ ಸಹನಾಶ್ರೀ ಕ್ರೆಡಿಟ್ ಸೌಹಾರ್ದ ಸಹಕಾರಿ ನಿಯಮಿತದ ಎರಡನೇ ಶಾಖೆ ಹಾಗೂ ಸಹನಾಶ್ರೀ ಫೌಂಡೇಶನ್ ಅನ್ನು ಸಚಿವ ಯು.ಟಿ. ಖಾದರ್ ಅವರು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬ್ಯಾಂಕಿಂಗ್ ಕ್ಷೇತ್ರಕ್ಕೆ ಕರಾವಳಿ ಕರ್ನಾಟಕದ ಕೊಡುಗೆ ಅಪಾರವಾಗಿದೆ. ಕೆನರಾ ಬ್ಯಾಂಕ್, ಸಿಂಡಿಕೇಟ್ ಬ್ಯಾಂಕ್, ವಿಜಯಾ ಬ್ಯಾಂಕ್, ಕಾರ್ಪೊರೇಷನ್ ಬ್ಯಾಂಕ್ ಹಾಗೂ ಕರ್ಣಾಟಕ ಬ್ಯಾಂಕ್‌ನಂತಹ ಪ್ರಮುಖ ಬ್ಯಾಂಕ್‌ಗಳು ಇದೇ ಕರಾವಳಿ ಮಣ್ಣಿನಲ್ಲಿ ಹುಟ್ಟಿಕೊಂಡಿವೆ. ಸಹಕಾರಿ ಚಳವಳಿಯಲ್ಲೂ ಕರಾವಳಿ ಪ್ರದೇಶ ಇಡೀ ರಾಜ್ಯಕ್ಕೆ ಮಾದರಿಯಾಗಿದೆ. ಇದು ನಮ್ಮೆಲ್ಲರ ಹೆಮ್ಮೆಯ ಸಂಗತಿ ಎಂದು ಹೇಳಿದರು.

ಕರಾವಳಿಯ ಈ ಸಹಕಾರಿ ಪರಂಪರೆಯನ್ನು ಮುಂದುವರಿಸಿಕೊಂಡು ಸಹನಾಶ್ರೀ ಸಂಸ್ಥೆಯು ಗ್ರಾಮೀಣ ಜನರ ಮನೆ ಬಾಗಿಲಿಗೆ ಬ್ಯಾಂಕಿಂಗ್ ಸೇವೆಗಳನ್ನು ತಲುಪಿಸುತ್ತಿರುವುದು ಸಂತಸದ ವಿಚಾರ. ಹೊಸ ಶಾಖೆಯಿಂದ ರೈತರು, ಸಣ್ಣ ವ್ಯಾಪಾರಿಗಳು, ಸ್ವಸಹಾಯ ಸಂಘಗಳು ಹಾಗೂ ಸ್ಥಳೀಯ ಕುಟುಂಬಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂಬ ವಿಶ್ವಾಸವಿದೆ ಎಂದರು.



ಸಹಕಾರಿ ಸಂಸ್ಥೆಗಳು ಜನರ ವಿಶ್ವಾಸಕ್ಕೆ ಪಾತ್ರವಾಗಿ, ಪಾರದರ್ಶಕತೆ ಮತ್ತು ಉತ್ತಮ ಸೇವೆಗೆ ಆದ್ಯತೆ ನೀಡುವ ಮೂಲಕ ಆರ್ಥಿಕ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ನೀಡಬೇಕು. ಸಹನಾಶ್ರೀ ಸಂಸ್ಥೆಯು ಜನರ ವಿಶ್ವಾಸ ಗಳಿಸಿ, ಉತ್ತಮ ಸೇವೆ ನೀಡುತ್ತಾ ಇನ್ನಷ್ಟು ಶಾಖೆಗಳನ್ನು ತೆರೆಯುವ ಮೂಲಕ ಅಭಿವೃದ್ಧಿ ಹೊಂದಲಿ ಎಂದು ಸಚಿವರು ಶುಭ ಹಾರೈಸಿದರು.

ಜಿಪಿಟಿ ಶಿಕ್ಷಕರ ಸಮಸ್ಯೆ ಪರಿಹಾರಕ್ಕೆ ಸರ್ಕಾರದ ಮಟ್ಟದಲ್ಲಿ ಪ್ರಯತ್ನ: ಷಡಾಕ್ಷರಿ ಭರವಸೆ

"ಮುಂಜಾನೆಯ ಮೆರಗು"

ಬೆಂಗಳೂರು ನ, 03– ಜಿಪಿಟಿ ಶಿಕ್ಷಕರು ಎದುರಿಸುತ್ತಿರುವ ವಿವಿಧ ಸೇವಾ ಸಂಬಂಧಿತ ಸಮಸ್ಯೆಗಳು ಹಾಗೂ ಕುಂದುಕೊರತೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಭರವಸೆ ನೀಡಿದರು.



ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಚೇರಿಯಲ್ಲಿ ಜಿಪಿಟಿ ಶಿಕ್ಷಕರ ಸಂಘದ ನೂತನ ಅಧ್ಯಕ್ಷ ಪಿ. ಮುರಳೀಧರ ಅವರ ನೇತೃತ್ವದ ನಿಯೋಗವು ರಾಜ್ಯಾಧ್ಯಕ್ಷ ಸಿ.ಎಸ್. ಷಡಾಕ್ಷರಿ ಅವರನ್ನು ಭೇಟಿ ಮಾಡಿ ಶಿಕ್ಷಕರ ವಿವಿಧ ಬೇಡಿಕೆಗಳು ಹಾಗೂ ಸಮಸ್ಯೆಗಳ ಕುರಿತು ಚರ್ಚಿಸಿತು.

ಈ ಸಂದರ್ಭದಲ್ಲಿ ಜಿಪಿಟಿ ಶಿಕ್ಷಕರ ಸಂಘದ ನೂತನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳನ್ನು ಅಭಿನಂದಿಸಿದ ಷಡಾಕ್ಷರಿ ಅವರು, ಸಂಘಟನೆಯ ಮುಂದಿನ ಕಾರ್ಯಚಟುವಟಿಕೆಗಳಿಗೆ ಶುಭ ಹಾರೈಸಿದರು.

ಸಭೆಯಲ್ಲಿ ಜಿಪಿಟಿ ಶಿಕ್ಷಕರ ಸೇವಾ ಸಮಸ್ಯೆಗಳು, ಕುಂದುಕೊರತೆಗಳು ಹಾಗೂ ಸಂಘದ ಪ್ರಮುಖ ಬೇಡಿಕೆಗಳ ಕುರಿತು ಸಕಾರಾತ್ಮಕವಾಗಿ ಸ್ಪಂದಿಸಿ ಪರಿಹಾರಕ್ಕೆ ಭರವಸೆ ನೀಡಿದ ರಾಜ್ಯಾಧ್ಯಕ್ಷರಿಗೆ ಜಿಪಿಟಿ ಶಿಕ್ಷಕರ ಸಂಘದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಹಾಗೂ ಜಿಪಿಟಿ ಶಿಕ್ಷಕರ ಸಂಘದ ಮುಖಂಡರು ಉಪಸ್ಥಿತರಿದ್ದರು.

ಮತದಾನದ ಹಕ್ಕಿನ ರಕ್ಷಣೆಗೆ ನ. 5ರಂದು ಬೆಂಗಳೂರಿನಲ್ಲಿ ಇಂಡಿಯಾ ಒಕ್ಕೂಟದ ಬೃಹತ್ ಪ್ರತಿಭಟನೆ: ಬಿ.ಕೆ. ಹರಿಪ್ರಸಾದ್

"ಮುಂಜಾನೆಯ ಮೆರಗು"

ಬೆಂಗಳೂರು ನ, 03– ಮತದಾರರ ಹಕ್ಕುಗಳ ರಕ್ಷಣೆ, ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಆಶಯಗಳ ಉಳಿವಿಗಾಗಿ ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯನ್ನು ವಿರೋಧಿಸಿ ನವೆಂಬರ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂಡಿಯಾ ಒಕ್ಕೂಟದ ವತಿಯಿಂದ ಬೃಹತ್ ಪ್ರತಿಭಟನಾ ಸಮಾವೇಶ ಆಯೋಜಿಸಲಾಗಿದೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತಿಳಿಸಿದರು.



ಕೆಪಿಸಿಸಿ ಕಚೇರಿಯಲ್ಲಿ ನಡೆದ ಇಂಡಿಯಾ ಒಕ್ಕೂಟದ ಮೈತ್ರಿಪಕ್ಷಗಳ ನಾಯಕರ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನವೆಂಬರ್ 1ರಂದು ದೆಹಲಿಯ ರಾಮಲೀಲಾ ಮೈದಾನದಲ್ಲಿ ನಡೆದ ಜನಾಂದೋಲನದ ಮುಂದುವರಿದ ಭಾಗವಾಗಿ ಬೆಂಗಳೂರಿನಲ್ಲಿ ಈ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಮತದಾರರ ಹಕ್ಕುಗಳಿಗೆ ಧಕ್ಕೆಯಾಗುತ್ತಿದೆ ಎಂಬ ಆತಂಕದ ಹಿನ್ನೆಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆ ರದ್ದುಗೊಳಿಸಬೇಕು ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ರಾಜೀನಾಮೆ ನೀಡಬೇಕು ಎಂಬುದು ಪ್ರತಿಭಟನೆಯ ಪ್ರಮುಖ ಆಗ್ರಹವಾಗಿದೆ ಎಂದರು.

ಮುಖ್ಯ ಚುನಾವಣಾ ಆಯುಕ್ತರ ನೇಮಕಾತಿಯಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನಗಳಿಗೆ ಅನುಗುಣವಾಗಿ ಪ್ರಜಾಸತ್ತಾತ್ಮಕ ವ್ಯವಸ್ಥೆ ಜಾರಿಗೊಳಿಸಬೇಕು. ಚುನಾವಣಾ ಆಯುಕ್ತರಿಗೆ ನೀಡಿರುವ ಕಾನೂನಾತ್ಮಕ ರಕ್ಷಣೆಯನ್ನೂ ಮರುಪರಿಶೀಲಿಸಬೇಕು ಎಂಬ ಬೇಡಿಕೆಗಳನ್ನು ಒಕ್ಕೂಟ ಮುಂದಿಟ್ಟಿದೆ ಎಂದು ತಿಳಿಸಿದರು.

ಸಾಂವಿಧಾನಿಕ ಸಂಸ್ಥೆಗಳ ಸ್ವಾಯತ್ತತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆಯ ಉದ್ದೇಶದಿಂದ ಈ ಹೋರಾಟ ರೂಪಿಸಲಾಗಿದೆ. ರಾಜ್ಯಮಟ್ಟದ ಪ್ರತಿಭಟನೆಯ ನಂತರ ಜಿಲ್ಲಾ, ತಾಲ್ಲೂಕು ಹಾಗೂ ಬ್ಲಾಕ್ ಮಟ್ಟದಲ್ಲಿಯೂ ಜನಾಂದೋಲನವನ್ನು ವಿಸ್ತರಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಿಪಿಎಂ ಕಾರ್ಯದರ್ಶಿ ಕೆ. ಪ್ರಕಾಶ್, ಸಿಪಿಐ ನಾಯಕ ಸಾಥಿ ಸುಂದರೇಶ್, ಮಹಾಂತೇಶ್, ಫಾರ್ವರ್ಡ್ ಬ್ಲಾಕ್‌ನ ಶಿವಶಂಕರ್, ಅಲಿ, ಸಿಪಿಐ(ಎಂಎಲ್) ನಾಯಕ ಕ್ಲಿಫ್ಟನ್ ಡಿ'ರೊಜಾರಿಯೋ ಹಾಗೂ ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ಉಪಸ್ಥಿತರಿದ್ದರು.

'ಈ ನನ್ನ ಮಕ್ಕಳು' ಹೇಳಿಕೆಗೆ ಕ್ಷಮೆಯಾಚಿಸಿದ ಬಿ.ವೈ. ವಿಜಯೇಂದ್ರ

"ಮುಂಜಾನೆಯ ಮೆರಗು"

ಬೆಂಗಳೂರು ನ, 03– ದಾವಣಗೆರೆಯಲ್ಲಿ ನೀಡಿದ್ದ ಹೇಳಿಕೆಯೊಂದಕ್ಕೆ ಸಂಬಂಧಿಸಿದಂತೆ ಉಂಟಾಗಿರುವ ವಿವಾದದ ಬೆನ್ನಲ್ಲೇ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಮ್ಮ ಮಾತಿನ ಬಗ್ಗೆ ವಿಷಾದ ವ್ಯಕ್ತಪಡಿಸಿ ಕ್ಷಮೆಯಾಚಿಸಿದ್ದಾರೆ.



ಈ ಕುರಿತು ಸ್ಪಷ್ಟನೆ ನೀಡಿರುವ ಅವರು, ದಾವಣಗೆರೆಯಲ್ಲಿ ಮಾತನಾಡುವ ಸಂದರ್ಭದಲ್ಲಿ ಕೆಲವು ಪದಗಳನ್ನು ಬಳಸಿರುವುದು ನಿಜ. ಅದನ್ನು ನಾನು ಒಪ್ಪಿಕೊಳ್ಳುತ್ತೇನೆ. ನನ್ನ ಮಾತಿನಿಂದ ಕಾಂಗ್ರೆಸ್‌ನವರಿಗೆ ನೋವಾಗಿದ್ದರೆ ಕ್ಷಮೆ ಕೇಳುತ್ತೇನೆ ಎಂದು ತಿಳಿಸಿದ್ದಾರೆ.

ಆದರೆ, ನಾನು ಉದ್ದೇಶಪೂರ್ವಕವಾಗಿ ಅಥವಾ ಯಾರನ್ನಾದರೂ ಅವಮಾನಿಸಬೇಕು ಎಂಬ ಆಲೋಚನೆಯಿಂದ ಆ ಪದಗಳನ್ನು ಬಳಸಿಲ್ಲ. ವೀರಶೈವ ಹಾಗೂ ಕೆಪಿಸಿಸಿ ವಿಚಾರವಾಗಿ ಮಾತನಾಡುವ ಸಂದರ್ಭದಲ್ಲಿ ಆಡಳಿತಾತ್ಮಕ ವಿಷಯಗಳ ಚರ್ಚೆಯ ವೇಳೆ ಆ ಪದಗಳು ಬಳಕೆಯಾಗಿವೆ. ಇದರಲ್ಲಿ ಬೇರೆ ಯಾವುದೇ ದುರುದ್ದೇಶ ಇರಲಿಲ್ಲ ಎಂದು ವಿಜಯೇಂದ್ರ ಸ್ಪಷ್ಟಪಡಿಸಿದ್ದಾರೆ.

ತಮ್ಮ ಹೇಳಿಕೆಯಿಂದ ಯಾರಿಗಾದರೂ ನೋವಾಗಿದ್ದರೆ ಅದಕ್ಕಾಗಿ ಕ್ಷಮೆಯಾಚಿಸುವುದಾಗಿ ತಿಳಿಸುವ ಮೂಲಕ ವಿವಾದಕ್ಕೆ ಸ್ಪಷ್ಟನೆ ನೀಡಲು ಪ್ರಯತ್ನಿಸಿದ್ದಾರೆ. ಈ ಹೇಳಿಕೆ ರಾಜಕೀಯ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಸರ್ಕಾರಿ ಶಾಲೆಯ ಅಭಿವೃದ್ಧಿಗೆ 81 ಲಕ್ಷ ಅನುದಾನ ನಾಲ್ಕು ಕೊಠಡಿ, ಶೌಚಾಲಯ ನಿರ್ಮಾಣಕ್ಕೆ ಭೂಮಿಪೂಜೆ

"ಮುಂಜಾನೆಯ ಮೆರಗು"

ಬಳ್ಳಾರಿ ನ, 03– ನಗರದ 17ನೇ ವಾರ್ಡ್‌ನ ಬಿ. ಗೋನಾಳ್ ಪ್ರದೇಶದಲ್ಲಿರುವ ಸರ್ಕಾರಿ ಶಾಲೆಯ ಅಭಿವೃದ್ಧಿಗಾಗಿ 81 ಲಕ್ಷ ವೆಚ್ಚದಲ್ಲಿ ನಾಲ್ಕು ನೂತನ ಕೊಠಡಿಗಳು ಹಾಗೂ ಶೌಚಾಲಯ ನಿರ್ಮಾಣ ಕಾಮಗಾರಿಗೆ ಶಾಸಕ ನಾರಾ ಭರತ್ ರೆಡ್ಡಿ ಅವರು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣದ ಜೊತೆಗೆ ಅಗತ್ಯ ಮೂಲಸೌಕರ್ಯ ಕಲ್ಪಿಸುವುದು ಅತ್ಯಗತ್ಯ. ವಿದ್ಯಾರ್ಥಿಗಳಿಗೆ ಉತ್ತಮ ಕಲಿಕಾ ವಾತಾವರಣ ನಿರ್ಮಿಸುವ ಉದ್ದೇಶದಿಂದ ಶಾಲೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಶಾಲೆಗಳಲ್ಲಿ ಸುಸಜ್ಜಿತ ಕೊಠಡಿಗಳು ಹಾಗೂ ಮೂಲಭೂತ ಸೌಲಭ್ಯಗಳು ದೊರೆತಾಗ ಮಕ್ಕಳ ಕಲಿಕೆಗೆ ಅನುಕೂಲವಾಗಲಿದೆ. ಈ ಕಾಮಗಾರಿಯನ್ನು ಗುಣಮಟ್ಟದೊಂದಿಗೆ ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟವರಿಗೆ ಸೂಚಿಸಲಾಗುವುದು ಎಂದರು.

ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಸುಸಜ್ಜಿತ ಶಾಲಾ ವಾತಾವರಣ ಒದಗಿಸುವ ಮೂಲಕ ಅವರ ಉಜ್ವಲ ಭವಿಷ್ಯ ರೂಪಿಸಲು ನಿರಂತರವಾಗಿ ಶ್ರಮಿಸಲಾಗುವುದು ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.



ವಿಚಾರಣೆಗೆ ಗೈರಾದ ನಟ ಧನ್ವೀರ್‌ಗೆ ಕಾನೂನು ಸಂಕಷ್ಟ

"ಮುಂಜಾನೆಯ ಮೆರಗು"

ಬೆಂಗಳೂರು, ನ 03– ವಿಚಾರಣೆಗೆ ಹಾಜರಾಗುವಂತೆ ನಟ ಧನ್ವೀರ್‌ಗೆ ಪೊಲೀಸರು ನೋಟೀಸ್ ನೀಡಿದರ

ಕನ್ನಡಿಗರಿಗೆ ಉದ್ಯೋಗಾವಕಾಶಕ್ಕಾಗಿ ಆರಂಭಿಸಿರುವ ಕರವೇ ಅಭಿಯಾನವನ್ನು ಅವಮಾನಿಸಿದ ತಮಿಳುನಾಡು ಐಪಿಎಸ್ ಅಧಿಕಾರಿ

"ಮುಂಜಾನೆಯ ಮೆರಗು"

ಬೆಂಗಳೂರು, ನ. 03– ಕರ್ನಾಟಕದಲ್ಲಿ ಕನ್ನಡಿಗರಿಗೆ ಉದ್ಯೋಗಾವಕಾಶ ಕಲ್ಪಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ಹಮ್ಮಿಕೊಂಡಿರುವ ಅಭಿಯಾನದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದ ತಮಿಳುನಾಡು ಕೇಡರ್ನ ಐಪಿಎಸ್ ಅಧಿಕಾರಿ ಧನುಷ್ ಕುಮಾರ್ ತೀವ್ರ ವಿರೋಧ ವ್ಯಕ್ತವಾದ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಹಾಕಿದ್ದ ಪೋಸ್ಟ್ ಡಿಲಿಟ್ ಮಾಡಿದ್ದಾರೆ.

ಕರವೇ ಕಾರ್ಯಕರ್ತರು ನಗರದ ವಿವಿಧ ಐಟಿ ಕಂಪನಿಗಳಿಗೆ ಭೇಟಿ ನೀಡಿ, ಉದ್ಯೋಗಿಗಳ ವಿವರ ಹಾಗೂ ನೇಮಕಾತಿ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿ ನೀಡುವಂತೆ ಮನವಿ ಪತ್ರಗಳನ್ನು ಸಲ್ಲಿಸುತ್ತಿದ್ದಾರೆ. ಈ ಅಭಿಯಾನದ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿದ್ದ ಧನುಷ್ ಕುಮಾರ್ ಅವರು, ಕೆಲಸವಿಲ್ಲದವರು ಇತರರು ಕೆಲಸ ಮಾಡುವುದನ್ನು ತಡೆಯುತ್ತಿದ್ದಾರೆ ಎಂಬ ಅರ್ಥದ ಹೇಳಿಕೆ ನೀಡಿದ್ದರು.

ಈ ಪೋಸ್ಟ್ನ ಸ್ಕ್ರೀನ್ಶಾಟ್ ವೈರಲ್ ಆಗುತ್ತಿದ್ದಂತೆ ಕನ್ನಡಿಗರ ಉದ್ಯೋಗ ಹಕ್ಕುಗಳಿಗಾಗಿ ನಡೆಯುತ್ತಿರುವ ಅಭಿಯಾನವನ್ನು ಅವಹೇಳನ ಮಾಡಲಾಗಿದೆ ಎಂಬ ಆಕ್ರೋಶ ವ್ಯಕ್ತವಾಯಿತು.ಕರವೇ ರಾಜ್ಯ ಸಂಘಟನಾ ಕಾರ್ಯದರ್ಶಿ ಹಾಗೂ ಐಟಿ ಉದ್ಯಮಿ ಅರುಣ್ ಜಾವಗಲ್ ಅವರು ಅಧಿಕಾರಿ ಹೇಳಿಕೆಗೆ ತೀವ್ರ ವಿರೋಧ ವ್ಯಕ್ತಪಡಿಸಿದರು. ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರನ್ನು ಟ್ಯಾಗ್ ಮಾಡಿ, ನಿಮ್ಮ ಸರ್ಕಾರದ ಉದ್ಯೋಗಿಯಾಗಿರುವ ಅಧಿಕಾರಿಯೊಬ್ಬರು ಕನ್ನಡಿಗರ ನ್ಯಾಯಯುತ ಅಭಿಯಾನದ ವಿರುದ್ಧ ಈ ರೀತಿ ಪ್ರತಿಕ್ರಿಯಿಸುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ಈ ಬೆಳವಣಿಗೆಯ ಬೆನ್ನಲ್ಲೇ ಅಧಿಕಾರಿ ತಮ್ಮ ಪೋಸ್ಟ್ ಅಳಿಸಿದ್ದಾರೆ.

ನೇಮಕಾತಿ ಮಾಹಿತಿ ಕೇಳುವುದೇ ಕೆಲಸಕ್ಕೆ ಅಡ್ಡಿಯೇ?ಐಟಿ ಸೇರಿದಂತೆ ಖಾಸಗಿ ಕಂಪನಿಗಳಲ್ಲಿ ಕನ್ನಡಿಗರಿಗೆ



ದೊರೆಯುತ್ತಿರುವ ಉದ್ಯೋಗಾವಕಾಶಗಳ ಕುರಿತು ಮಾಹಿತಿ ಸಂಗ್ರಹಿಸುವುದು ಕರವೇಯ ಆಗ್ರಹ ಅಭಿಯಾನದ ಪ್ರಮುಖ ಉದ್ದೇಶವಾಗಿದೆ. ಕಂಪನಿಗಳಲ್ಲಿರುವ ಒಟ್ಟು ಉದ್ಯೋಗಿಗಳ ಸಂಖ್ಯೆ, ಅವರಲ್ಲಿ ಕನ್ನಡಿಗರ ಪ್ರಮಾಣ, ಕಳೆದ ಮೂರು ವರ್ಷಗಳಲ್ಲಿ ನಡೆದ ನೇಮಕಾತಿ, ನೇಮಕಾತಿ ಮಾನದಂಡಗಳು ಹಾಗೂ ಸ್ಥಳೀಯ ಅಭ್ಯರ್ಥಿಗಳಿಗೆ ನೀಡುತ್ತಿರುವ ಅವಕಾಶಗಳ ಕುರಿತು ಸಂಘಟನೆ ಮಾಹಿತಿ ಕೇಳುತ್ತಿದೆ.

ಈ ಸಂಬಂಧ ಕರವೇ ಪ್ರತಿನಿಧಿಗಳು ವಿವಿಧ ಕಂಪನಿಗಳಿಗೆ ಮನವಿ ಪತ್ರ ಸಲ್ಲಿಸುತ್ತಿದ್ದಾರೆ. ಉದ್ಯೋಗ ನೇಮಕಾತಿಯಲ್ಲಿ ಕನ್ನಡಿಗರಿಗೆ ಸಿಗುತ್ತಿರುವ ಅವಕಾಶಗಳ ಕುರಿತು ಸ್ಪಷ್ಟತೆ ಪಡೆಯುವುದು ಮತ್ತು ಸಂಗ್ರಹಿಸಿದ ಮಾಹಿತಿಯ ಆಧಾರದಲ್ಲಿ ಸರ್ಕಾರದ ಗಮನ ಸೆಳೆಯುವುದು ಸಂಘಟನೆಯ ಉದ್ದೇಶವಾಗಿದೆ. ಕಂಪನಿಗಳು ಮಾಹಿತಿ ನೀಡುವ ಅಥವಾ ನಿರಾಕರಿಸುವ ನಿರ್ಧಾರ ಕೈಗೊಳ್ಳಬಹುದಾದರೂ, ಮಾಹಿತಿ ಕೇಳುವ ಪ್ರಕ್ರಿಯೆಯನ್ನೇ ಕೆಲಸಕ್ಕೆ ಅಡ್ಡಿಪಡಿಸುವಿಕೆ ಎಂದು ಬಿಂಬಿಸುವುದು ಎಷ್ಟು ಸಮಂಜಸ ಎಂಬ ಪ್ರಶ್ನೆ ಎದ್ದಿದೆ.

ಶಾಂತಿಯುತ ಅಭಿಯಾನಕ್ಕೆ ತಪ್ಪು ಚಿತ್ರಣ; ಕಂಪನಿಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಘೋಷಣೆ ಕೂಗಬಾರದು, ಸಂಘರ್ಷಕ್ಕೆ ಇಳಿಯಬಾರದು ಹಾಗೂ ಉದ್ಯೋಗಿಗಳ ಕೆಲಸಕ್ಕೆ ಯಾವುದೇ ರೀತಿಯ ಅಡ್ಡಿಪಡಿಸಬಾರದು ಎಂದು ಕಾರ್ಯಕರ್ತರಿಗೆ ಸೂಚಿಸಲಾಗಿದೆ ಎಂದು ಕರವೇ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ತಿಳಿಸಿದ್ದಾರೆ.

ನವೆಂಬರ್ ತಿಂಗಳಾದ್ಯಂತ ರಾಜ್ಯದ ವಿವಿಧ ಭಾಗಗಳಲ್ಲಿ ಅಭಿಯಾನ ಮುಂದುವರಿಯಲಿದ್ದು, ಈ ವೇಳೆ ಸಂಗ್ರಹಿಸುವ ಮಾಹಿತಿ ಮತ್ತು ಉದ್ಯೋಗಾಕಾಂಕ್ಷಿಗಳ ದೂರುಗಳನ್ನು ಪರಿಶೀಲಿಸಿ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸುವ ಉದ್ದೇಶವಿದೆ.

ಕನ್ನಡಿಗರಿಗೆ ಉದ್ಯೋಗಾವಕಾಶಗಳಲ್ಲಿ ಆಗುತ್ತಿರುವ ಅನ್ಯಾಯದ ಕುರಿತು ಪ್ರಶ್ನಿಸುವುದು ಅಪರಾಧವಲ್ಲ. ನೇಮಕಾತಿ ಪ್ರಕ್ರಿಯೆಯಲ್ಲಿ ಸ್ಥಳೀಯರಿಗೆ ದೊರೆಯುತ್ತಿರುವ ಅವಕಾಶಗಳ ಬಗ್ಗೆ ಮಾಹಿತಿ ಕೇಳುವುದನ್ನು ಕೆಲಸಕ್ಕೆ ಅಡ್ಡಿಪಡಿಸುವಿಕೆ ಎಂದು ಬಿಂಬಿಸುವುದು ಸರಿಯಲ್ಲ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ.

ಕನ್ನಡಿಗರ ಉದ್ಯೋಗ ಹಕ್ಕುಗಳ ಕುರಿತು ನಡೆಯುತ್ತಿರುವ ಅಭಿಯಾನದ ಬಗ್ಗೆ ಜವಾಬ್ದಾರಿಯುತವಾಗಿ ಪ್ರತಿಕ್ರಿಯಿಸಬೇಕಾದ ಅಧಿಕಾರಿಯೊಬ್ಬರ ಹೇಳಿಕೆ ವಿವಾದಕ್ಕೆ ಕಾರಣವಾಗಿದ್ದು, ತೀವ್ರ ವಿರೋಧದ ಬಳಿಕ ಪೋಸ್ಟ್ ಅಳಿಸಿರುವುದು ಚರ್ಚೆಗೆ ಗ್ರಾಸವಾಗಿದೆ.

ಕೋಲಾರದಲ್ಲಿ ಗಣ್ಯರ ಮನೆಗಳಿಗೆ ಭೇಟಿ ನೀಡಿ ಪ್ರಧಾನಿ ಮೋದಿ ಸಾಧನೆಗಳ ಪುಸ್ತಕ ವಿತರಣೆ

"ಮುಂಜಾನೆಯ ಮೆರಗು"

ಕೋಲಾರ: ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಜನಸೇವೆ ಹಾಗೂ ಆಡಳಿತಾತ್ಮಕ ಸಾಧನೆಗಳನ್ನು ಜನರಿಗೆ ಪರಿಚಯಿಸುವ ಉದ್ದೇಶದಿಂದ ಬಿಜೆಪಿ ವತಿಯಿಂದ ಕೋಲಾರದಲ್ಲಿ ಸಮಾಜದ ವಿವಿಧ ಕ್ಷೇತ್ರಗಳ ಗಣ್ಯರ ಮನೆಗಳಿಗೆ ಭೇಟಿ ನೀಡಿ ವಿಶೇಷ ಪುಸ್ತಕ ವಿತರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.



ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ ಅವರೊಂದಿಗೆ ಪಕ್ಷದ ಮುಖಂಡರು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರನ್ನು ಭೇಟಿ ಮಾಡಿ, '25 ವರ್ಷಗಳ ಸಾಧನೆಗಳು–ಸಾಕಾರಗೊಂಡ ಚಿಂತನೆಗಳು' ಎಂಬ ಪುಸ್ತಕವನ್ನು ನೀಡಿ ಸಂವಾದ ನಡೆಸಿದರು.

ಶಿಕ್ಷಣ ಕ್ಷೇತ್ರದ ಸಾಧಕಿ ಶಿಕ್ಷಣತಜ್ಞೆ ಉಷಾ ಗಂಗಾಧರ್, ವೈದ್ಯಕೀಯ ಕಾಲೇಜಿನ ಉಪಪ್ರಾಂಶುಪಾಲ ಡಾ. ಕೆ. ದಿನೇಶ್ ಹಾಗೂ 'ಪ್ರಜಾ ವಿಮೋಚನಾ ಚಳವಳಿ'ಯ ನಾಯಕ ಕೃಷ್ಣಪ್ಪ ಸೇರಿದಂತೆ ಹಲವು ಗಣ್ಯರ ಮನೆಗಳಿಗೆ ಭೇಟಿ ನೀಡಲಾಯಿತು.

ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆ, ಆಡಳಿತಾತ್ಮಕ ಕಾರ್ಯವೈಖರಿ ಹಾಗೂ ವಿವಿಧ ಕ್ಷೇತ್ರಗಳಲ್ಲಿನ ಸಾಧನೆಗಳನ್ನು ಒಳಗೊಂಡ ಪುಸ್ತಕದ ಕುರಿತು ಮಾಹಿತಿ ಹಂಚಿಕೊಳ್ಳಲಾಯಿತು. ಗಣ್ಯರೊಂದಿಗೆ ಸಂವಾದ ನಡೆಸಿ ಪುಸ್ತಕದ ಉದ್ದೇಶವನ್ನು ಪರಿಚಯಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಂಸದ ಮುನಿಸ್ವಾಮಿ, ಕೋಲಾರ ಬಿಜೆಪಿ ಜಿಲ್ಲಾಧ್ಯಕ್ಷ ಓಂಶಕ್ತಿ ಚಲಪತಿ ಸೇರಿದಂತೆ ಪಕ್ಷದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

ಹಾಲು, ಮೊಸರು, ಬಸ್ ದರ ಏರಿಕೆ ವಿರುದ್ಧ ರಾಜ್ಯ ಸರ್ಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಾಗ್ದಾಳಿ

"ಮುಂಜಾನೆಯ ಮೆರಗು"

ಕೋಲಾರ ನ, 03– ರಾಜ್ಯದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಖರಿ ಹಾಗೂ ಜನಸಾಮಾನ್ಯರ ಮೇಲೆ ಹೆಚ್ಚುತ್ತಿರುವ ಆರ್ಥಿಕ ಹೊರೆಯನ್ನು ಖಂಡಿಸಿ ಬಿಜೆಪಿ ವತಿಯಿಂದ ಕೋಲಾರದಲ್ಲಿ ಆಯೋಜಿಸಿದ್ದ 'ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ' ಪಾದಯಾತ್ರೆಯಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಭಾಗವಹಿಸಿ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.



ಪಾದಯಾತ್ರೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ಪ್ರಜಾಪ್ರಭುತ್ವದ ಹೆಸರಿನಲ್ಲಿ ದೇಶದಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನ ನಡೆಸುತ್ತಿವೆ ಎಂದು ಆರೋಪಿಸಿದರು. ಚುನಾವಣೆಯಲ್ಲಿ ಗೆಲುವು ಸಾಧಿಸಿದಾಗ ಇವಿಎಂ ವ್ಯವಸ್ಥೆಯನ್ನು ಸಮರ್ಥಿಸಿಕೊಳ್ಳುವ ಕಾಂಗ್ರೆಸ್, ಸೋಲು ಅನುಭವಿಸಿದಾಗ ಇವಿಎಂಗಳ ಮೇಲೆ ಆರೋಪ ಮಾಡುತ್ತಿರುವುದು ಅದರ ರಾಜಕೀಯ ದ್ವಂದ್ವ ನಿಲುವಿಗೆ ಸಾಕ್ಷಿಯಾಗಿದೆ ಎಂದು ಟೀಕಿಸಿದರು.

ರಾಜ್ಯದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನದ ಕೊರತೆ ಎದುರಾಗಿದೆ. ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕಾದ ಸರ್ಕಾರ ಹಾಲು, ಮೊಸರು ಹಾಗೂ ಬಸ್ ಪ್ರಯಾಣ ದರ ಹೆಚ್ಚಿಸುವ ಮೂಲಕ ಸಾಮಾನ್ಯ ಜನರ ಮೇಲೆ ಹೆಚ್ಚುವರಿ ಹೊರೆ ಹಾಕಿದೆ. ರೈತರಿಗೆ ಬರ ಪರಿಹಾರ ಒದಗಿಸುವಲ್ಲಿಯೂ ಸರ್ಕಾರ ವಿಫಲವಾಗಿದೆ ಎಂದು ದೂರಿದರು.

ರಾಜ್ಯದ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ದೆಹಲಿಯಲ್ಲಿ ಪ್ರತಿಭಟನೆ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯಗಳನ್ನು ಜನರ ಮುಂದಿಡಲು ಬಿಜೆಪಿ ಹೋರಾಟ ನಡೆಸುತ್ತಿದೆ. ಪ್ರಜಾಪ್ರಭುತ್ವದ ಮೌಲ್ಯಗಳ ರಕ್ಷಣೆ ಹಾಗೂ ಜನರ ಸಮಸ್ಯೆಗಳ ಪರಿಹಾರಕ್ಕಾಗಿ ಪಕ್ಷ ನಿರಂತರ ಹೋರಾಟ ನಡೆಸಲಿದೆ ಎಂದು ತಿಳಿಸಿದರು.

ಪಾದಯಾತ್ರೆಯಲ್ಲಿ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ರಾಜ್ಯ ಉಸ್ತುವಾರಿ ಹರೀಶ್ ದ್ವಿವೇದಿ, ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಡಾ. ಅಶ್ವತ್ಥನಾರಾಯಣ, ಕೋಲಾರ ಜಿಲ್ಲಾಧ್ಯಕ್ಷ ಓಂಶಕ್ತಿ ಛಲಪತಿ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಸಾವಿರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

ಯುವತಿ ಕುತ್ತಿಗೆ ಚಾಕುಯಿಟ್ಟು ಸರಗಳ್ಳತನಕ್ಕೆ ಯತ್ನಿಸಿದವನನ್ನ ಥಳಿಸಿ ಪೊಲೀಸರಿಗೊಪ್ಪಿಸಿದ ಸಾರ್ವಜನಿರು

"ಮುಂಜಾನೆಯ ಮೆರಗು"

ಬೆಂಗಳೂರು, ನ.03– ಹಾಡಹಗಲೇ ಕಚೇರಿಯೊಂದಕ್ಕೆ ನುಗ್ಗಿ ಯುವತಿಗೆ ಚಾಕುವಿನಿಂದ ಬೆದರಿಸಿ ಸರ ಕಿತ್ತುಕೊಂಡು ಪರಾರಿಯಾಗಲು ಯತ್ನಿಸಿದ ವ್ಯಕ್ತಿಗೆ ಸಾರ್ವಜನಿಕರು ಥಳಿಸಿ ಪೊಲೀಸರಿಗೆ ಒಪ್ಪಿಸಿದ್ದಾರೆ.ಸೂರ್ಯಸಿಟಿ ನಗರದ ನಿವಾಸಿ ಪ್ರಭುರಾಜ್ ಅಲಿಯಾಸ್ ರಾಜ್ (40) ಬಂಧಿತ ಆರೋಪಿ. ಈತ ವೃತ್ತಿಯಲ್ಲಿ ಡೆಲಿವರಿ ಬಾಯ್.



ಇಂದಿರಾನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿರುವ 100 ಅಡಿ ರಸ್ತೆಯ ಪ್ರಿಮಿಯಂ ಶ್ಯೂ ಮತ್ತು ಬ್ಯಾಗ್ ರಿಪೇರಿ ಅಂಗಡಿಯ ಮಾಲೀಕರಾದ ರಂಜಿತ್ಕುಮಾರ್ ಅವರ ಬಳಿ ರಿಶಪ್ಷನ್ನಿಸ್ಟ್ ಆಗಿ ಕಳೆದ 3 ವರ್ಷಗಳಿಂದ ಜಯಶ್ರೀ (23) ಎಂಬ ಯುವತಿ ಕೆಲಸ ಮಾಡಿಕೊಂಡಿದ್ದಾರೆ.

ಅ.31 ರಂದು ಬೆಳಗ್ಗೆ 11 ಗಂಟೆ ಸುಮಾರಿಗೆ ಜಯಶ್ರೀ ಅವರು ಎಂದಿನಂತೆ ಅಂಗಡಿಗೆ ಬಂದು ಬಾಗಿಲು ತೆಗೆದು ಕೆಲಸದಲ್ಲಿ ನಿರತರಾಗಿದ್ದಾಗ 11.45 ರ ಸುಮಾರಿನಲ್ಲಿ ವ್ಯಕ್ತಿಯೊಬ್ಬ ಹೆಲೆಟ್ ಹಾಗೂ ಹ್ಯಾಂಡ್ ಗ್ಲೌಸ್ ಧರಿಸಿಕೊಂಡು ಏಕಾಏಕಿ ಇವರ ಅಂಗಡಿಗೆ ನುಗ್ಗಿದ್ದಾನೆ.

ತಕ್ಷಣ ಜಯಶ್ರೀ ಅವರು ಗಾಬರಿಯಾಗಿ ಕಿರುಚಿಕೊಂಡಾಗ ಯಾರೋ ನನ್ನನ್ನು ಸಾಯಿಸಲು ಬರುತ್ತಿದ್ದಾರೆ. ಕೂಗಾಡಬೇಡಿ ಎಂದು ಹೇಳಿದ್ದಾನೆ. ವ್ಯಕ್ತಿಯ ನಡವಳಿಕೆಯಿಂದ ಆತಂಕಗೊಂಡ ಯುವತಿ ಅಂಗಡಿ ಮಾಲೀಕರಿಗೆ ಕರೆ ಮಾಡಲು ಮೊಬೈಲ್ ತೆಗೆದುಕೊಳ್ಳುತ್ತಿದ್ದಂತೆ ಆ ವ್ಯಕ್ತಿ ಆಕೆಯನ್ನು ಬಲವಂತದಿಂದ ಕೆಳಗೆ ಕೂರಿಸಿ,ಬ್ಯಾಗಿನಲ್ಲಿದ್ದ ಚಾಕುವನ್ನು ಕುತ್ತಿಗೆ ಬಳಿ ಇಟ್ಟು ಕೂಗಾಡಿದರೆ ನಿನ್ನನ್ನು ಸಾಯಿಸುತ್ತೇನೆಂದು ಹೆದರಿಸಿದ್ದಾನೆ.

ನಂತರ ಆಕೆಯ ಕೈಗಳಿಗೆ ಪೆವಿಕ್ವಿಕ್ ಹಾಕಿ ಎರಡು ಕೈಗಳನ್ನು ಟೇಬಲ್ಗೆ ಅಂಟಿಸಿ ಅಲ್ಲೇ ಇದ್ದ ಬಟ್ಟೆಯನ್ನು ಆಕೆಯ ಬಾಯಿಗೆ ತುರುಕಿ ಹಲ್ಲೆ ನಡೆಸಿ ಆಕೆ ಧರಿಸಿದ್ದ 35 ಗ್ರಾಂ ಮಾಂಗಲ್ಯ ಸರವನ್ನು ಕಿತ್ತುಕೊಂಡು ಹೊರಗೆ ಓಡಿದ್ದಾನೆ.ತಕ್ಷಣ ಜಯಶ್ರೀ ಅವರು ಕೈಯನ್ನು ಬಿಡಿಸಿಕೊಂಡು ಸಹಾಯಕ್ಕಾಗಿ ಹೊರಗೆ ಬಂದು ಕಿರುಚಾಡುತ್ತಿದ್ದಂತೆ ಸಾರ್ವಜನಿಕರು ಅಂಗಡಿ ಬಳಿ ಆಗಮಿಸಿದ್ದಾರೆ.

ತಾನು ಸಿಕ್ಕಿ ಹಾಕಿಕೊಳ್ಳುವ ಭಯದಲ್ಲಿ ಆರೋಪಿ ಪುನಃ ಯುವತಿ ಬಳಿ ಬಂದು ಆಕೆಯ ಕೂದಲನ್ನು ಹಿಡಿದು–ಕೊಂಡು ಕುತ್ತಿಗೆಗೆ ಚಾಕು ಇರಿಸಿ ನನ್ನನ್ನು ಯಾರಾದರೂ ತಡೆದರೆ ಸಾಯಿಸುವುದಾಗಿ ಹೆದರಿಸಿದ್ದಾನೆ.ಅಷ್ಟರಲ್ಲಿ ಅಂಗಡಿ ಮಾಲೀಕರು ಬಂದು ಆರೋಪಿಯನ್ನು ಹಿಡಿಯಲು ಮುಂದಾದಾಗ ಅವರ ಮೇಲೆ ಚಾಕುವನ್ನು ಬೀಸಿದ್ದರಿಂದ ಅವರು ಕೂಡ ಗಾಯಗೊಂಡಿದ್ದಾರೆ. ಆ ಸಂದರ್ಭದಲ್ಲಿ ಆರೋಪಿ ಪರಾರಿಯಾಗಲು ಯತ್ನಿಸಿದಾಗ ಸಾರ್ವಜನಿಕರು ಆತನನ್ನು ಹಿಡಿದು ಥಳಿಸಿ ಪೊಲೀಸರಿಗೆ ವಿಷಯ ತಿಳಿಸಿ ಅವರಿಗೆ ಒಪ್ಪಿಸಿದ್ದಾರೆ.

ಪೊಲೀಸರು ಆತನನ್ನು ವಶಕ್ಕೆ ಪಡೆದು ಠಾಣೆಗೆ ಕರೆದೊಯ್ದು ಬಂಧಿಸಿ ವಿಚಾರಣೆಗೆ ಒಳಪಡಿಸಿದಾಗ ನನ್ನ ಪತ್ನಿ ಅನಾರೋಗ್ಯದಿಂದ ಬಳಲುತ್ತಿದ್ದಾರೆ. ಹಾಗಾಗಿ ಹಣದ ಅವಶ್ಯಕತೆ ಇದ್ದುದ್ದರಿಂದ ಈ ರೀತಿ ಮಾಡಬೇಕಾಯಿತು ಎಂದು ಹೇಳಿದ್ದಾನೆ.ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಮೈಸೂರು ದಸರಾ ಜಂಬೂಸವಾರಿಯಲ್ಲಿ ಶಿವಮೊಗ್ಗದ ಹಸೆ ಚಿತ್ತಾರದ ಸ್ತಬ್ಧಚಿತ್ರಕ್ಕೆ ಪ್ರಥಮ ಬಹುಮಾನ

"ಮುಂಜಾನೆಯ ಮೆರಗು"

ಶಿವಮೊಗ್ಗ ನ, 03– ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಜಂಬೂಸವಾರಿ ಮೆರವಣಿಗೆಯಲ್ಲಿ ಭಾಗವಹಿಸಿದ್ದ ಶಿವಮೊಗ್ಗ ಜಿಲ್ಲೆಯ ಸ್ತಬ್ಧಚಿತ್ರಕ್ಕೆ ಬೆಂಗಳೂರು ವಿಭಾಗದಲ್ಲಿ ಪ್ರಥಮ ಬಹುಮಾನ ಲಭಿಸಿರುವುದು ಸಂತಸದ ಹಾಗೂ ಹೆಮ್ಮೆಯ ಸಂಗತಿಯಾಗಿದೆ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹರ್ಷ ವ್ಯಕ್ತಪಡಿಸಿದ್ದಾರೆ.

ಶಿವಮೊಗ್ಗ ಜಿಲ್ಲಾ ಪಂಚಾಯತ್ ವತಿಯಿಂದ ನಿರ್ಮಿಸಲಾಗಿದ್ದ ಈ ಸ್ತಬ್ಧಚಿತ್ರವು ಮಲೆನಾಡಿನ ಪ್ರಸಿದ್ಧ ಜಾನಪದ ಕಲೆಯಾದ 'ಹಸೆ ಚಿತ್ತಾರ'ದ ವೈಭವವನ್ನು ನಾಡಿನ ಜನರಿಗೆ ಪರಿಚಯಿಸುವಲ್ಲಿ ಯಶಸ್ವಿಯಾಗಿದೆ. ಪ್ರಕೃತಿಯ ಸೊಬಗು, ಗ್ರಾಮೀಣ ಬದುಕು, ಕೃಷಿ ಚಟುವಟಿಕೆ, ಹೈನುಗಾರಿಕೆ ಹಾಗೂ ಕರಕುಶಲ ಕಲೆಗಳ ವೈವಿಧ್ಯತೆಯನ್ನು ಒಳಗೊಂಡ ಸ್ತಬ್ಧಚಿತ್ರವು ವೀಕ್ಷಕರ ಗಮನ ಸೆಳೆದಿತ್ತು.

ಹಸೆ ಚಿತ್ತಾರವು ಸಂಪೂರ್ಣವಾಗಿ ನೈಸರ್ಗಿಕ ಬಣ್ಣಗಳನ್ನು ಬಳಸಿ ರಚಿಸುವ ವಿಶಿಷ್ಟ ಜಾನಪದ ಕಲೆಯಾಗಿದೆ. ಕೆಮ್ಮಣ್ಣು, ಅಕ್ಕಿ ಹಿಟ್ಟು, ಮಸಿ ಕೆಂಡ, ಕಾರೆಕಾಯಿ, ಗುರಗೆಕಾಯಿ, ಸುಣ್ಣ, ಅರಿಶಿನ ಹಾಗೂ ಹಾಲು ಸೇರಿದಂತೆ ನೈಸರ್ಗಿಕ ವಸ್ತುಗಳಿಂದ ಬಿಳಿ, ಕಪ್ಪು, ಕೆಂಪು ಮತ್ತು ಹಳದಿ ಬಣ್ಣಗಳನ್ನು ತಯಾರಿಸಿ ಈ ಚಿತ್ತಾರವನ್ನು ಬಿಡಿಸಲಾಗುತ್ತದೆ. ಮಲೆನಾಡಿನ ಜನರ ಸಂಸ್ಕೃತಿ, ಸಂಪ್ರದಾಯ ಹಾಗೂ ಸಂತೋಷದ ಬದುಕನ್ನು ಪ್ರತಿಬಿಂಬಿಸುವ ಈ ಕಲೆಗೆ ವಿಶಿಷ್ಟ ಪರಂಪರೆಯಿದೆ.

ಮಲೆನಾಡಿನ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ರಾಜ್ಯದ ಜನರಿಗೆ



ಪರಿಚಯಿಸಿದ ಶಿವಮೊಗ್ಗ ಜಿಲ್ಲೆಯ ಸ್ತಬ್ಧಚಿತ್ರಕ್ಕೆ ಪ್ರಥಮ ಬಹುಮ

ನ.8ರಂದು ‘ಆಧುನಿಕ ಭಗೀರಥರ 57ರ ಸಂಭ್ರಮ’

ಗುರುಸಿದ್ದಾಪುರದಲ್ಲಿ ಬೃಹತ್ ಕಾರ್ಯಕ್ರಮ ಆಯೋಜನೆ; ವೇದಿಕೆ, ಪಾರ್ಕಿಂಗ್, ಊಟೋಪಚಾರ ವ್ಯವಸ್ಥೆಗಳ ಪರಿಶೀಲನೆ

“ಮುಂಜಾನೆಯ ಮೆರಗು”

ಜಗಳೂರು ನ, 03– ಹಲವು ವರ್ಷಗಳಿಂದ ಬರಗಾಲದ ಬವಣೆ ಎದುರಿಸುತ್ತಿದ್ದ ಜಗಳೂರು ವಿಧಾನಸಭಾ ಕ್ಷೇತ್ರದ ಜನರಿಗೆ ಆಶಾಕಿರಣವಾಗಿರುವ 57 ಕೆರೆಗಳಿಗೆ ಏತ ನೀರಾವರಿ ಯೋಜನೆಯ ಮೂಲಕ ನೀರು ತಲುಪಿರುವ ಹಿನ್ನೆಲೆಯಲ್ಲಿ ನ.8ರಂದು ಗುರುಸಿದ್ದಾಪುರ ಗ್ರಾಮದ ಚೌಡೇಶ್ವರಿ ದೇವಸ್ಥಾನದ ಆವರಣದಲ್ಲಿ ‘ಆಧುನಿಕ ಭಗೀರಥರ 57ರ ಸಂಭ್ರಮ’ ಎಂಬ ಹೆಸರಿನಲ್ಲಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು.



ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸುವ ಉದ್ದೇಶದಿಂದ ಕೆಪಿಸಿಸಿ ಎಸ್ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಅವರು ಗುರುಸಿದ್ದಾಪುರ (ಮಡ್ರಳ್ಳಿ) ಗ್ರಾಮಕ್ಕೆ ಭೇಟಿ ನೀಡಿ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರೊಂದಿಗೆ ಪೂರ್ವಭಾವಿ ಚರ್ಚೆ ನಡೆಸಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರು, ರೈತರು, ಮಹಿಳೆಯರು ಹಾಗೂ ವಿವಿಧ ಗ್ರಾಮಗಳ ಮುಖಂಡರಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವ ಕುರಿತು ಸ್ಥಳ ಪರಿಶೀಲನೆ ನಡೆಸಿದರು. ಮುಖ್ಯವಾಗಿ ಕಾರ್ಯಕ್ರಮದ ವೇದಿಕೆ ನಿರ್ಮಾಣ, ಸಾರ್ವಜನಿಕರ ಆಸನ ವ್ಯವಸ್ಥೆ, ವಾಹನಗಳ ಸುಗಮ ಸಂಚಾರಕ್ಕೆ ಪಾರ್ಕಿಂಗ್ ವ್ಯವಸ್ಥೆ, ಕುಡಿಯುವ ನೀರು, ಊಟೋಪಚಾರ ಹಾಗೂ ಇತರೆ ಮೂಲಸೌಕರ್ಯಗಳ ಕುರಿತು ಸಮಾಲೋಚನೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಯಾವುದೇ ಗೊಂದಲ ಅಥವಾ ಅನಾನುಕೂಲ ಉಂಟಾಗದಂತೆ ವ್ಯವಸ್ಥಿತವಾಗಿ ಸಿದ್ಧತೆ ಕೈಗೊಳ್ಳಲು ಹಲವು ಮಹತ್ವದ ನಿರ್ಧಾರಗಳನ್ನು ತೆಗೆದುಕೊಳ್ಳಲಾಯಿತು.

ಬರದ ನಾಡಿಗೆ ನೀರಿನ ಭಾಗ್ಯ:

ಜಗಳೂರು ತಾಲೂಕು ದೀರ್ಘಕಾಲದಿಂದ ಮಳೆಯ ಕೊರತೆ, ಅಂತರ್ಜಲ ಕುಸಿತ ಹಾಗೂ ಕೃಷಿ ನೀರಿನ ಅಭಾವದಿಂದ ಸಂಕಷ್ಟ ಎದುರಿಸುತ್ತಿರುವ ಪ್ರದೇಶವಾಗಿದೆ. ಮಳೆ ಆಶ್ರಿತ ಕೃಷಿಯನ್ನೇ ಅವಲಂಬಿಸಿರುವ ಸಾವಿರಾರು ರೈತ ಕುಟುಂಬಗಳಿಗೆ ನೀರಿನ ಸಮಸ್ಯೆ ದೊಡ್ಡ ಸವಾಲಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಏತ ನೀರಾವರಿ ಯೋಜನೆಯ ಮೂಲಕ ಕ್ಷೇತ್ರದ 57 ಕೆರೆಗಳಿಗೆ ನೀರು ಹರಿದಿರುವುದು ಜನರಲ್ಲಿ ಹೊಸ ಭರವಸೆ ಮೂಡಿಸಿದೆ.

ಕೆರೆಗಳಿಗೆ ನೀರು ತುಂಬುವುದರಿಂದ ಅಂತರ್ಜಲ ಮಟ್ಟ ವೃದ್ಧಿಯಾಗುವ ನಿರೀಕ್ಷೆಯಿದ್ದು, ಸುತ್ತಮುತ್ತಲಿನ ಗ್ರಾಮಗಳ ಬಾವಿ, ಕೊಳವೆಬಾವಿಗಳಲ್ಲಿ ನೀರಿನ ಲಭ್ಯತೆ ಹೆಚ್ಚಲು ಸಹಕಾರಿಯಾಗಲಿದೆ. ಇದರಿಂದ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯುವುದರ ಜತೆಗೆ ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಗ್ರಾಮೀಣ ಪ್ರದೇಶಗಳ ನೀರಿನ ಸಮಸ್ಯೆ ನಿವಾರಣೆಗೆ ಪೂರಕ ವಾತಾವರಣ ನಿರ್ಮಾಣವಾಗಲಿದೆ ಎಂಬ ಆಶಯ ರೈತರಲ್ಲಿದೆ.

ಈ ಹಿನ್ನೆಲೆಯಲ್ಲಿ 57 ಕೆರೆಗಳಿಗೆ ನೀರು ಹರಿದಿರುವುದನ್ನು ಸ್ಮರಿಸುವ ಹಾಗೂ ಯೋಜನೆಯ ಮಹತ್ವವನ್ನು ಜನರಿಗೆ ತಿಳಿಸುವ ಉದ್ದೇಶದಿಂದ ‘ಆಧುನಿಕ ಭಗೀರಥರ 57ರ ಸಂಭ್ರಮ’ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮಕ್ಕೆ



ಕ್ಷೇತ್ರದ ವಿವಿಧ ಗ್ರಾಮಗಳಿಂದ ಅಪಾರ ಸಂಖ್ಯೆಯಲ್ಲಿ ರೈತರು, ಸಾರ್ವಜನಿಕರು ಹಾಗೂ ಅಭಿಮಾನಿಗಳು ಭಾಗವಹಿಸುವ ನಿರೀಕ್ಷೆಯಿದೆ.

ಕಾರ್ಯಕ್ರಮದ ಸಿದ್ಧತೆಗಳ ಕುರಿತು ಮಾತನಾಡಿದ ಎಂ.ಡಿ. ಕೀರ್ತಿಕುಮಾರ್ ಅವರು, 57 ಕೆರೆಗಳಿಗೆ ನೀರು ಹರಿದಿರುವುದು ಜಗಳೂರು ಕ್ಷೇತ್ರದ ಅಭಿವೃದ್ಧಿಯ ದೃಷ್ಟಿಯಿಂದ ಮಹತ್ವದ ಮೈಲಿಗಲ್ಲಾಗಿದೆ. ಈ ಸಂಭ್ರಮದಲ್ಲಿ ಕ್ಷೇತ್ರದ ಜನರು ಒಗ್ಗಟ್ಟಿನಿಂದ ಭಾಗವಹಿಸಬೇಕು. ಕಾರ್ಯಕ್ರಮಕ್ಕೆ ಆಗಮಿಸುವ ಪ್ರತಿಯೊಬ್ಬರಿಗೂ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಗ್ರಾಮಸ್ಥರು ಹಾಗೂ ಮುಖಂಡರ ಸಹಕಾರ ಅತ್ಯಗತ್ಯವಾಗಿದೆ ಎಂಬ ಆಶಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗುರುಸಿದ್ದಾಪುರ ಗ್ರಾಮದ ಮುಖಂಡರು, ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದು, ಕಾರ್ಯಕ್ರಮದ ಯಶಸ್ಸಿಗೆ ಸಂಪೂರ್ಣ ಸಹಕಾರ ನೀಡುವ ಭರವಸೆ ವ್ಯಕ್ತಪಡಿಸಿದರು.

ವಕೀಲರ ಹತ್ಯೆ, ಮಾರಣಾಂತಿಕ ಹಲ್ಲೆ ಖಂಡಿಸಿ ವಕೀಲರ ಸಂಘದಿಂದ ಪ್ರತಿಭಟನೆ

“ಮುಂಜಾನೆಯ ಮೆರಗು”

ಜಗಳೂರು, ನ, 03– ರಾಜ್ಯದ ವಿವಿಧೆಡೆ ವಕೀಲರ ಮೇಲೆ ನಡೆಯುತ್ತಿರುವ ಹತ್ಯೆ ಹಾಗೂ ಮಾರಣಾಂತಿಕ ಹಲ್ಲೆ ಪ್ರಕರಣಗಳನ್ನು ತೀವ್ರವಾಗಿ ಖಂಡಿಸಿ, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಜಗಳೂರು ತಾಲ್ಲೂಕು ನ್ಯಾಯವಾದಿಗಳ ಸಂಘದ ವತಿಯಿಂದ ಸೋಮವಾರ ನ್ಯಾಯಾಲಯದ ಕಲಾಪಗಳಿಂದ ಹೊರಗುಳಿದು ಪ್ರತಿಭಟನೆ ನಡೆಸಲಾಯಿತು.

ಬೆಂಗಳೂರಿನ ವೈಟ್‌ಫೀಲ್ಡ್‌ನ ವಕೀಲ ಮಂಜುನಾಥ ಶ್ರೀರಾಮ್, ಅನ್ನಪೂರ್ಣೇಶ್ವರಿ ನಗರದ ವಕೀಲ ಮಂಜುನಾಥ ಅವರ ಹತ್ಯೆ ಹಾಗೂ ಗೌರಿಬಿದನೂರಿನ ವಕೀಲ ವೆಂಕಟರಮಣ ಸಣ್ಣಕ್ಕಿ ಅವರ ಮೇಲಿನ ಕೊಲೆಯತ್ನ ಪ್ರಕರಣಗಳನ್ನು ಖಂಡಿಸಿ ವಕೀಲರು ನ್ಯಾಯಾಲಯದ ಕಲಾಪಗಳಿಂದ ದೂರ ಉಳಿದು ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಾಲ್ಲೂಕು ದಂಡಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

ವಕೀಲರ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಡಿ.ವಿ. ನಾಗಪ್ಪ ಮಾತನಾಡಿ, ನ್ಯಾಯಕ್ಕಾಗಿ ಹೋರಾಡುವ ವಕೀಲರಿಗೇ ಇಂದು ಸೂಕ್ತ ರಕ್ಷಣೆ ಇಲ್ಲದಂತಾಗಿದೆ. ರಾಜ್ಯದ ವಿವಿಧೆಡೆ ವಕೀಲರ ಮೇಲೆ ನಡೆಯುತ್ತಿರುವ ಹತ್ಯೆ ಹಾಗೂ ಮಾರಣಾಂತಿಕ ಹಲ್ಲೆ ಪ್ರಕರಣಗಳು ಆತಂಕಕಾರಿ ಬೆಳವಣಿಗೆಯಾಗಿವೆ. ವಕೀಲರು ನಿರ್ಭೀತಿಯಿಂದ ತಮ್ಮ ವೃತ್ತಿ ನಿರ್ವಹಿಸಲು ಸರ್ಕಾರ ಸೂಕ್ತ ಭದ್ರತೆ ಒದಗಿಸಬೇಕು. ಹತ್ಯೆ ಹಾಗೂ ಕೊಲೆಯತ್ನ ಪ್ರಕರಣಗಳಲ್ಲಿ ಭಾಗಿಯಾಗಿರುವ ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಸಂಘದ ಮಾಜಿ ತಾಲ್ಲೂಕು ಅಧ್ಯಕ್ಷ ಮರೇನಹಳ್ಳಿ ಟಿ. ಬಸವರಾಜ್ ಮಾತನಾಡಿ, ವಕೀಲರ ಸಂಘದ ಕಚೇರಿಯಲ್ಲಿ ನಡೆದ ಸರ್ವಸದಸ್ಯರ ಸಭೆಯಲ್ಲಿ ವಕೀಲರ ಹತ್ಯೆ, ಮಾರಣಾಂತಿಕ ಹಲ್ಲೆ ಹಾಗೂ ಕೊಲೆಯತ್ನ ಪ್ರಕರಣಗಳನ್ನು ಖಂಡಿಸಿ ಸರ್ವಾನುಮತದಿಂದ



ನಿರ್ಣಯ ಕೈಗೊಳ್ಳಲಾಗಿದೆ. ನ್ಯಾಯಕ್ಕಾಗಿ ಹೋರಾಡುವ ವಕೀಲರಿಗೇ ಜೀವಭಯ ಎದುರಾಗಿರುವುದು ನಾಗರಿಕ ಸಮಾಜ ತಲೆತಗ್ಗಿಸುವ ಸಂಗತಿಯಾಗಿದೆ. ಇಂತಹ ಘಟನೆಗಳು ಮರುಕಳಿಸದಂತೆ ಸರ್ಕಾರ ಕಠಿಣ ಕ್ರಮ ಕೈಗೊಳ್ಳಬೇಕು. ರಾಜ್ಯದ ಎಲ್ಲ ವಕೀಲರಿಗೆ ಸೂಕ್ತ ರಕ್ಷಣೆ ಒದಗಿಸುವ ಮೂಲಕ ವೃತ್ತಿಯ ಘನತೆ ಮತ್ತು ಭದ್ರತೆಯನ್ನು ಕಾಪಾಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಕೀಲರ ಸಂಘದ ಮಾಜಿ ಅಧ್ಯಕ್ಷರಾದ ಬಿ.ಪಿ. ಓಂಕಾರಪ್ಪ, ಹೆಚ್.ಬಿ. ಬಸವರಾಜ್, ವಕೀಲರಾದ ಕರಿಬಸಪ್ಪ, ಜಿ.ಟಿ. ಮಹಾಂತೇಶ್, ಕೆ.ಎಂ. ಸುನೀಲ್, ಎಂ. ನಾಗೇಶ್, ಎಂ.ಹೆಚ್. ತಿಪ್ಪೇಸ್ವಾಮಿ, ಬಿ. ತಿಪ್ಪೇಸ್ವಾಮಿ, ಅಂಜಿನಪ್ಪ, ಅರುಣ್ ಕುಮಾರ್ ಸೇರಿದಂತೆ ಸಂಘದ ಸರ್ವಸದಸ್ಯರು ಉಪಸ್ಥಿತರಿದ್ದರು.

ಗೃಹಲಕ್ಷ್ಮಿ ಫಲಾನುಭವಿಗಳಿಗೆ ಸ್ವಂತ ಹೆಸರಿನಲ್ಲೇ ಸಿಮ್ ಕಡ್ಡಾಯ? ಹೊಸ ಸಿಮ್ ಪಡೆಯಲು ಮೊಬೈಲ್ ಅಂಗಡಿಗಳಿಗೆ ಅಲೆದಾಟ

“ಮುಂಜಾನೆಯ ಮೆರಗು”

ಜಗಳೂರು ನ, 03– ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ತಮ್ಮ ಸ್ವಂತ ಹೆಸರಿನಲ್ಲಿರುವ ಮೊಬೈಲ್ ಸಿಮ್‌ಕಾರ್ಡ್ ಹೊಂದಿರಬೇಕು ಎಂಬ ಸೂಚನೆಯ ಹಿನ್ನೆಲೆಯಲ್ಲಿ ಹೊಸ ಸಿಮ್ ಪಡೆಯಲು ಮಹಿಳೆಯರು ಮೊಬೈಲ್ ರಿಟೇಲರ್‌ಗಳ ಅಂಗಡಿಗಳಿಗೆ ಅಲೆದಾಡುತ್ತಿರುವುದು ಪಟ್ಟಣ ಸೇರಿದಂತೆ ತಾಲೂಕಿನಾದ್ಯಂತ ಕಂಡುಬರುತ್ತಿದೆ.



ತಾಲೂಕಿನಲ್ಲಿ ಸುಮಾರು 40 ಸಾವಿರಕ್ಕೂ ಅಧಿಕ ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿದ್ದಾರೆ. ಇವರಲ್ಲಿ ಅನೇಕರು ತಮ್ಮ ಪತಿ, ಮಕ್ಕಳು, ಸಹೋದರ, ಸಹೋದರಿ ಹಾಗೂ ಕುಟುಂಬದ ಇತರ ಸದಸ್ಯರ ಹೆಸರಿನಲ್ಲಿ ಪಡೆದಿರುವ ಸಿಮ್‌ಕಾರ್ಡ್‌ಗಳನ್ನು ಬಳಸುತ್ತಿದ್ದಾರೆ. ಇದೀಗ ಫಲಾನುಭವಿಗಳ ಸ್ವಂತ ಹೆಸರಿನಲ್ಲೇ ಸಿಮ್‌ಕಾರ್ಡ್ ಹೊಂದಿರಬೇಕೆಂಬ ಮಾಹಿತಿ ಹರಡಿರುವುದರಿಂದ ಮಹಿಳೆಯರು ಹೊಸ ಸಿಮ್ ಪಡೆಯಲು ಅಥವಾ ಹಳೆಯ ಸಿಮ್‌ಕಾರ್ಡ್‌ಗಳನ್ನು ತಮ್ಮ ಹೆಸರಿಗೆ ಬದಲಾಯಿಸಿಕೊಳ್ಳಲು ಮುಂದಾಗಿದ್ದಾರೆ.

ಕಳೆದ ಕೆಲವು ದಿನಗಳಿಂದ ಮೊಬೈಲ್ ಅಂಗಡಿಗಳಲ್ಲಿ ಸಿಮ್ ಪಡೆಯಲು ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಬರುತ್ತಿದ್ದು, ಆಧಾರ್ ಸೇರಿದಂತೆ ಅಗತ್ಯ ದಾಖಲೆಗಳನ್ನು ನೀಡಿ ಹೊಸ ಸಿಮ್‌ಕಾರ್ಡ್ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಇದರಿಂದ ಮೊಬೈಲ್ ರಿಟೇಲರ್‌ಗಳ ಅಂಗಡಿಗಳಲ್ಲಿ ಫಲಾನುಭವಿಗಳ ಓಡಾಟ ಹೆಚ್ಚಾಗಿದೆ.

ಈಗಾಗಲೇ ಹಲವು ವರ್ಷಗಳಿಂದ ಕುಟುಂಬದ ಸದಸ್ಯರ ಹೆಸರಿನಲ್ಲಿರುವ ಮೊಬೈಲ್ ಸಂಖ್ಯೆಯನ್ನು ಬಳಸುತ್ತಿರುವ ಮಹಿಳೆಯರಿಗೆ ಸಿಮ್ ಬದಲಾವಣೆ ಮಾಡಿಕೊಳ್ಳುವುದು ಅನಿವಾರ್ಯವೇ ಎಂಬ ಗೊಂದಲವೂ ಉಂಟಾಗಿದೆ. ಗೃಹಲಕ್ಷ್ಮಿ ಯೋಜನೆಯ ಹಣ ಜಮೆಯಾಗುವ ಪ್ರಕ್ರಿಯೆಗೆ ಸಂಬಂಧಿಸಿದಂತೆ ಇಂತಹ ಬದಲಾವಣೆ ಕಡ್ಡಾಯವಾಗಿದೆಯೇ ಎಂಬುದರ ಕುರಿತು ಸಂಬಂಧಪಟ್ಟ ಇಲಾಖೆಯವರು ಸ್ಪಷ್ಟ ಮಾಹಿತಿ ನೀಡಬೇಕು. ಫಲಾನುಭವಿಗಳಿಗೆ ಅನಗತ್ಯ ಗೊಂದಲ ಮತ್ತು ಅಲೆದಾಟ ತಪ್ಪಿಸಲು ಅಧಿಕೃತ ಮಾರ್ಗಸೂಚಿ ಪ್ರಕಟಿಸಬೇಕೆಂಬ ಒತ್ತಾಯವೂ ಕೇಳಿಬರುತ್ತಿದೆ.

ಅರಣ್ಯ ಸಂಪತ್ತು, ಪ್ರಾಣಿ–ಪಕ್ಷಿಗಳ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ

ಚಿಕ್ಕಪುಟ್ಟ ಪಕ್ಷಿಗಳ ಬೇಟೆ ಕಾನೂನುಬಾಹಿರ: ನಿತಿನ್ ಬಲ್ಲವರ್ ಎಚ್ಚರಿಕೆ

“ಮುಂಜಾನೆಯ ಮೆರಗು”

ಜಗಳೂರು ನ, 03– ಅರಣ್ಯ ಸಂಪತ್ತು, ವನ್ಯಜೀವಿಗಳು ಹಾಗೂ ಪ್ರಾಣಿ–ಪಕ್ಷಿಗಳನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೆ ಉಳಿಸಿಕೊಡುವುದು ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದೆ ಎಂದು ವಲಯ ಅರಣ್ಯಾಧಿಕಾರಿ ನಿತಿನ್ ಬಲ್ಲವಾರ್ ತಿಳಿಸಿದರು.

ಪಟ್ಟಣದ ಅರಣ್ಯ ಇಲಾಖೆ ಕಚೇರಿಯಲ್ಲಿ ಮಾತನಾಡಿದ ಅವರು, ಜಗಳೂರು ಪಟ್ಟಣದ ಸಮೀಪದ ನಿಂಗನಹಳ್ಳಿ ರಸ್ತೆಯಲ್ಲಿರುವ ಅರಣ್ಯ ಪ್ರದೇಶವು ಅಪಾರ ಪ್ರಮಾಣದ ನೈಸರ್ಗಿಕ ಸಂಪತ್ತನ್ನು ಹೊಂದಿದೆ. ಈ ಪ್ರದೇಶದಲ್ಲಿ ಚಿರತೆ, ಕರಡಿ, ತೋಳ, ನರಿ, ಆಮೆ, ನವಿಲು ಸೇರಿದಂತೆ ವಿವಿಧ ಬಗೆಯ ವನ್ಯಜೀವಿಗಳು ಹಾಗೂ ಹಲವಾರು ಜಾತಿಯ ಪಕ್ಷಿಗಳು ವಾಸಿಸುತ್ತಿವೆ. ಇದರೊಂದಿಗೆ ವೈವಿಧ್ಯಮಯ ಸಸ್ಯಸಂಪತ್ತು ಕೂಡ ಇಲ್ಲಿನ ಪರಿಸರದ ಸಮತೋಲನ ಕಾಪಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದರು.

ಅರಣ್ಯ ಪ್ರದೇಶವು ಕೇವಲ ಮರಗಿಡಗಳ ಸಮೂಹವಲ್ಲ. ಅದು ಸಾವಿರಾರು ಜೀವಿಗಳಿಗೆ ಆಶ್ರಯ ನೀಡುವ ನೈಸರ್ಗಿಕ ನೆಲೆಯಾಗಿದೆ. ಪ್ರಾಣಿ, ಪಕ್ಷಿಗಳು ಹಾಗೂ ಸಸ್ಯಸಂಕುಲ ಒಂದಕ್ಕೊಂದು ಪೂರಕವಾಗಿದ್ದು, ಇವುಗಳ ಅಸ್ತಿತ್ವದಿಂದಲೇ ಪರಿಸರ ವ್ಯವಸ್ಥೆ ಸಮತೋಲನದಿಂದ ಇರಲು ಸಾಧ್ಯ. ಹೀಗಾಗಿ ಅರಣ್ಯ ನಾಶ ಹಾಗೂ ವನ್ಯಜೀವಿಗಳ ಬೇಟೆಯಂತಹ ಚಟುವಟಿಕೆಗಳಿಗೆ ಕಡಿವಾಣ ಹಾಕುವುದು ಅತ್ಯಗತ್ಯವಾಗಿದೆ ಎಂದು ಹೇಳಿದರು.

ಇತ್ತೀಚಿನ ದಿನಗಳಲ್ಲಿ ಕೆಲವರು ಚಿಕ್ಕಪುಟ್ಟ ಪಕ್ಷಿಗಳನ್ನು ಬೇಟೆಯಾಡುತ್ತಿರುವ ಬಗ್ಗೆ ಮಾಹಿತಿ ಕೇಳಿಬಂದಿದೆ. ಇಂತಹ ಕೃತ್ಯಗಳು ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಕಾನೂನುಬಾಹಿರವಾಗಿದ್ದು, ಪಕ್ಷಿಗಳನ್ನು ಬೇಟೆಯಾಡುವುದು, ಹಿಡಿಯುವುದು ಅಥವಾ ಅವುಗಳ ವಾಸಸ್ಥಾನಕ್ಕೆ ಹಾನಿ ಉಂಟುಮಾಡುವುದು ಅಪರಾಧವಾಗಿದೆ. ಪ್ರಕೃತಿಯಲ್ಲಿರುವ ಪ್ರತಿಯೊಂದು ಜೀವಿಗೂ ಬದುಕುವ ಹಕ್ಕಿದೆ. ಮನುಷ್ಯನಂತೆ ಪ್ರಾಣಿ–ಪಕ್ಷಿಗಳೂ ಪರಿಸರದ ಅವಿಭಾಜ್ಯ ಅಂಗಗಳಾಗಿವೆ. ಅವುಗಳ ಜೀವಿಸುವ ಹಕ್ಕನ್ನು ಗೌರವಿಸಿ ರಕ್ಷಿಸಬೇಕು ಎಂದು ತಿಳಿಸಿದರು.



ಅರಣ್ಯ ಪ್ರದೇಶಗಳಲ್ಲಿ ಅನಗತ್ಯವಾಗಿ ಬೆಂಕಿ ಹಚ್ಚುವುದು, ಮರಗಿಡಗಳನ್ನು ನಾಶಪಡಿಸುವುದು, ವನ್ಯಜೀವಿಗಳಿಗೆ ತೊಂದರೆ ನೀಡುವುದು ಹಾಗೂ ಪಕ್ಷಿಗಳ ಬೇಟೆಯಾಡುವಂತಹ ಕೃತ್ಯಗಳಿಂದ ದೂರವಿರಬೇಕು. ಅರಣ್ಯ ಮತ್ತು ವನ್ಯಜೀವಿಗಳ ಸಂರಕ್ಷಣೆಯಲ್ಲಿ ಸಾರ್ವಜನಿಕರ ಸಹಕಾರ ಅತ್ಯಂತ ಮುಖ್ಯವಾಗಿದೆ. ಅರಣ್ಯ ಪ್ರದೇಶದಲ್ಲಿ ಯಾವುದೇ ಅಕ್ರಮ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣ ಅರಣ್ಯ ಇಲಾಖೆಯ ಗಮನಕ್ಕೆ ತರಬೇಕು ಎಂದು ಮನವಿ ಮಾಡಿದರು.

ಪ್ರಕೃತಿಯ ಸಂಪತ್ತನ್ನು ಉಳಿಸುವುದು ಕೇವಲ ಅರಣ್ಯ ಇಲಾಖೆಯ ಜವಾಬ್ದಾರಿಯಲ್ಲ. ಪ್ರತಿಯೊಬ್ಬರೂ ಪರಿಸರ ಪ್ರೇಮ ಬೆಳೆಸಿಕೊಂಡು, ಪ್ರಾಣಿ–ಪಕ್ಷಿಗಳನ್ನು ರಕ್ಷಿಸುವ ಮೂಲಕ ಹಸಿರು ಪರಿಸರ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ನಿತಿನ್ ಬಲ್ಲವಾರ್ ಕರೆ ನೀಡಿದರು.

ಪೋಕ್ಸೋ ಕಾಯ್ದೆ ಕುರಿತು ವಿದ್ಯಾರ್ಥಿನಿಯರಿಗೆ ಅರಿವು ಅಗತ್ಯ: ಸಿಪಿಐ ಸಿದ್ರಾಮಯ್ಯ

“ಮುಂಜಾನೆಯ ಮೆರಗು”

ಜಗಳೂರು ನ, 03– ವಿದ್ಯಾರ್ಥಿನಿಯರು ತಮ್ಮ ಹಕ್ಕುಗಳು, ಸುರಕ್ಷತೆ ಹಾಗೂ ಕಾನೂನಿನ ರಕ್ಷಣೆಯ ಬಗ್ಗೆ ಅರಿವು ಹೊಂದಿರಬೇಕು. ಯಾವುದೇ ರೀತಿಯ ಸಮಸ್ಯೆ ಅಥವಾ ಕಿರುಕುಳ ಎದುರಾದಲ್ಲಿ ಭಯಪಡದೆ ಪೋಷಕರು ಹಾಗೂ ಶಿಕ್ಷಕರ ಗಮನಕ್ಕೆ ತಂದು ಪರಿಹಾರ ಕಂಡುಕೊಳ್ಳಬೇಕು ಎಂದು ಸಿಪಿಐ ಸಿದ್ರಾಮಯ್ಯ ವಿದ್ಯಾರ್ಥಿನಿಯರಿಗೆ ಸಲಹೆ ನೀಡಿದರು.



ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ಕಳೆದ ಕೆಲವು ದಿನಗಳ ಹಿಂದೆ ನಡೆದ ಜಾಗೃತಿ ಕಾರ್ಯಕ್ರಮದ ಸಂದರ್ಭದಲ್ಲಿ ವಿದ್ಯಾರ್ಥಿನಿಯರಿಗೆ ಪೋಕ್ಸೋ (ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳಿಂದ ರಕ್ಷಣೆ) ಕಾಯ್ದೆಯ ಕುರಿತು ಅವರು ವಿವರವಾದ ಮಾಹಿತಿ ನೀಡಿದರು.

ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯ ಹಾಗೂ ಕಿರುಕುಳ ತಡೆಗಟ್ಟಲು ಪೋಕ್ಸೋ ಕಾಯ್ದೆ ಜಾರಿಯಲ್ಲಿದೆ. ಮಕ್ಕಳ ಸುರಕ್ಷತೆಗೆ ಈ ಕಾನೂನು ವಿಶೇಷ ರಕ್ಷಣೆ ಒದಗಿಸುತ್ತದೆ. ವಿದ್ಯಾರ್ಥಿನಿಯರು ತಮ್ಮ ದೇಹದ ಗೌರವ ಮತ್ತು ವೈಯಕ್ತಿಕ ಸುರಕ್ಷತೆಯ ಬಗ್ಗೆ ತಿಳಿದುಕೊಳ್ಳಬೇಕು. ಯಾರಾದರೂ ಅನುಚಿತವಾಗಿ ವರ್ತಿಸಿದರೆ ಅಥವಾ ಕಿರುಕುಳ ನೀಡಿದರೆ ಅದನ್ನು ಸಹಿಸಿಕೊಳ್ಳಬಾರದು. ಇಂತಹ ಘಟನೆಗಳನ್ನು ಯಾರಿಗೂ ಹೇಳದೆ ಮುಚ್ಚಿಡುವ ಪ್ರಯತ್ನ ಮಾಡಬಾರದು. ತಕ್ಷಣವೇ ಪೋಷಕರು, ಶಿಕ್ಷಕರು ಅಥವಾ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಬೇಕು ಎಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಫಲಿತಾ